# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 201 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 26–02–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 201 | Title- Code: KARKAN 28269 | Chitradurga | Date: 26-02-2024 Monday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಪರಿಶಿಷ್ಟ ವರ್ಗದ ಕಲ್ಯಾಣಕ್ಕಾಗಿ ಮೀಸಲಾತಿ ಸೌಲಭ್ಯ ಕಲ್ಪಿಸಿದ ಕೀರ್ತಿ ಬಿಜೆಪಿಗೆ 2
15 ನೂತನ ಬಸ್‌ಗಳು ಗ್ರಾಮೀಣ ಜನರ ಸೇವೆಗೆ ಬರಲಿವೆ: ಶಾಸಕ ಗೋವಿಂದಪ್ಪ 3
ನಾಯಕನಹಟ್ಟಿ ಜಾತ್ರೆ: ಈ ಬಾರಿ ಜಕಾತಿ ವಸೂಲಿ ಇಲ್ಲ 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಚೌಳೂರು ಗೋಶಾಲೆಗೆ ಶಾಸಕ ಭೇಟಿ

## ಗೋಶಾಲೆಯಲ್ಲಿ ಮೇವು ನೀರಿನ ಸೌಲಭ್ಯ ಕುರಿತು ಟಿ.ರಘುಮೂರ್ತಿ ಪರಿಶೀಲನೆ

» **ಚಳ್ಳಕೆರೆ**

ಸರ್ಕಾರ ಚಳ್ಳಕೆರೆ ತಾಲ್ಲೂಕನ್ನು ಬರಗಾಲಪೀಡಿತ ಪ್ರದೇಶವೆಂದು ಘೋಷಿಸಿದ ಬೆನ್ನಲೆ ಪರಶುರಾಮಪುರ, ಕಸಬಾ ಮತ್ತು ತುರುವನೂರು ಹೋಬಳಿಯಲ್ಲಿ ಗೋಶಾಲೆಗಳನ್ನು ತಕ್ಷಣವೇ ಆರಂಭಿಸಲು ಸರ್ಕಾರ ಸೂಚಿಸಿದ್ದು, ಚೌಳೂರು ಗ್ರಾಮದಲ್ಲಿ ಗೋಶಾಲೆ ಆರಂಭವಾಗಿ ಸುಮಾರು 300ಕ್ಕೂ ಹೆಚ್ಚು ಜಾನುವಾರುಗಳಿಗೆ ಪ್ರತಿನಿತ್ಯ ಮೇವು ಹಾಗೂ ನೀರಿನ ವ್ಯವಸ್ಥೆ ಸಮರ್ಪಕವಾಗಿ ಇದೆ ಎಂದು ರಾಜ್ಯ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ಮಧ್ಯಾಹ್ನ ಚೌಳೂರು ಗ್ರಾಮದ ಗೋಶಾಲೆಗೆ ಭೇಟಿ ನೀಡಿ ಮೇವು ವಿತರಣೆ ಹಾಗೂ ಸೌಲಭ್ಯಗಳ ಬಗ್ಗೆ ರೈತರೊಂದಿಗೆ ಚರ್ಚೆ ನಡೆಸಿದರು.ಪ್ರತಿನಿತ್ಯವೂ ಜಾನುವಾರುಗಳಿಗೆ





ಸಮಪರ್ಕವಾಗಿ ಮೇವು ದೊರೆಯುತ್ತಿದ್ದು, ನೀರಿನ ಸೌಲಭ್ಯವೂ ಉತ್ತಮವಾಗಿ ಎಂದು ರೈತರು ತಿಳಿಸಿದರು.ಗೋಶಾಲೆಯನ್ನು ಆರಂಭಿಸಿ ಜಾನುವಾರುಗಳನ್ನು ರಕ್ಷಣೆ ಮಾಡುವ ಕಾರ್ಯ ಮುಂದುವರೆಯಲಿದೆ. ಕಸಬಾ ಹೋಬಳಿ ಮಟ್ಟದಲ್ಲಿ ಅಜ್ಜಯ್ಯನ 'ಗುಡಿ ಹತ್ತಿರ ಗೋಶಾಲೆ ಆರಂಭಿಸಿದ್ದು, ಕುರುಡಿಹಳ್ಳಿ ಗ್ರಾಮದ ಬಳಿ ಈಗಾಗಲೇ ಸರ್ಕಾರದಿಂದಲೇ ಶಾಶ್ವತ ಗೋಶಾಲೆ ಯಶಸ್ವಿಯಾಗಿ ನಡೆಯುತ್ತಿದೆ ಎಂದರು. ಈ ಭಾಗದಲ್ಲಿ ಉತ್ತಮ ಮಳೆಯಾಗುವ ತನಕ ಗೋಶಾಲೆಯನ್ನು ಮುಂದುವರೆಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿರುವುದಾಗಿ ತಿಳಿಸಿದರು.ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ನಗರಸಭಾ ಸದಸ್ಯ ಬಿ.ಟಿ.ರಮೇಶ್‌ಗೌಡ, ಮುಖಂಡರಾದ ಬಸವರಾಜು, ನರಸಿಂಹಮೂರ್ತಿ, ದೇವರಾಜ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಫೆ.26 ರಂದು ಪಿಎಂಇಜಿಪಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಖಾದಿ ಮತ್ತು ಗ್ರಾಮೋದ್ಯೋಗ ಆಯೋಗ ಇವರ ಸಹಯೋಗದಲ್ಲಿ ಇದೇ ಫೆ.26ರಂದು ಮಧ್ಯಾಹ್ನ 2ಕ್ಕೆ ಚಿತ್ರದುರ್ಗ ನಗರದ ಸ್ಟೇಡಿಯಂ ರಸ್ತೆಯ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಪಿಎಂಇಜಿಪಿ ಯೋಜನೆ ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸ್ವಂತ ಉದ್ಯೋಗ ಕೈಗೊಳ್ಳಲು ಆಸಕ್ತಿ ಇರುವ ಫಲಾನುಭವಿಗಳಿಗಾಗಿ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ನಿರುದ್ಯೋಗ ಯುವಕ, ಯುವತಿಯರು ಭಾಗವಹಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿ ಸಿ.ಒ.ಸುಜಾತ ತಿಳಿಸಿದ್ದಾರೆ.

### ಮಾರ್ಚ್ 2ರಂದು ರಕ್ತದಾನ ಶಿಬಿರ



» **ಚಿತ್ರದುರ್ಗ**

ಭಾರತೀಯ ವೈದ್ಯಕೀಯ ಸಂಘ ಹಾಗೂ ಕರ್ನಾಟಕ ರಾಜ್ಯ ಮಾದಿಗ ಸಮಾಜ ಜಿಲ್ಲಾ ಘಟಕದ ವತಿಯಿಂದ ಎರಡನೇ ವರ್ಷದ ರಕ್ತದಾನ ಶಿಬಿರ ವನ್ನು ಮಾರ್ಚ್ 2ರಂದು ಮಧ್ಯಾಹ್ನ 12ಕ್ಕೆ ಚಿತ್ರದುರ್ಗ ನಗರದ ಮದಕರಿ ಸರ್ಕಲ್ ಸಮೀಪದ ಐಎಂಎ ಹಾಲ್‌ನಲ್ಲಿ ಆಯೋಜಿಸಲಾಗಿದೆ.ರಕ್ತದಾನ ಶಿಬಿರಕ್ಕೂ ಮುನ್ನಾ ಬೆಳಿಗ್ಗೆ 10.30 ರಿಂದ 11.30 ರವರೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಉದ್ಘಾಟನೆ ನೆರವೇರಿಸುವರು. ಕಾರ್ಯಕ್ರಮದಲ್ಲಿ ಜನಪ್ರತಿನಿಧಿಗಳು, ಅಧಿಕಾರಿಗಳು, ವಿವಿಧ ಗಣ್ಯರು ಭಾಗವಹಿಸುವರು. ಹೆಚ್ಚಿನ ಮಾಹಿತಿಗಾಗಿ 7259812209, 9108106829 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### 29ಕ್ಕೆ ಸಂತ ಸೇವಾಲಾಲ್ ಜಯಂತೋತ್ಸವ

» **ಚಿತ್ರದುರ್ಗ**

ಸಂತ ಸೇವಾಲಾಲರ 285ನೇ ಜಯಂತೋತ್ಸವ ಹಾಗೂ ವಿಧಾನಸಭೆಯ ಉಪ ಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿಯವರಿಗೆ ಅಭಿನಂಧನಾ ಸಮಾರಂಭವನ್ನು ಫೆಬ್ರವರಿ 29ರ ಗುರುವಾರ ಬೆಳಿಗ್ಗೆ 11.30ಕ್ಕೆ ತ.ರಾ.ಸು. ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿಯ ಪ್ರಧಾನ ಕಾರ್ಯದರ್ಶಿ ನರೇನಹಳ್ಳಿ ಅರುಣ್‌ಕುಮಾರ್ ತಿಳಿಸಿದ್ದಾರೆ. ಫೆಬ್ರವರಿ–26 ರ ಸೋಮವಾರ ಸೇವಾಲಾಲ್ ಜಯಂತಿ ಮತ್ತು ರುದ್ರಪ್ಪ ಮಾನಪ್ಪ ಲಮಾಣಿಯವರಿಗೆ ಅಭಿನಂಧನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಅಧಿವೇಶನ ಮುಂದುವರೆದಿರುವ ಪ್ರಯುಕ್ತ ದಿನಾಂಕವನ್ನು ಮುಂದೂಡಿ 29 ಫೆಬ್ರವರಿ 2024 ರಂದು ಕಾರ್ಯಕ್ರಮ ನಡೆಸಲು ತೀರ್ಮಾನಿಸಲಾಗಿದೆ.ಸಂತ ಸೇವಾಲಾಲರ 285ನೇ ಜಯಂತೋತ್ಸವ ಹಾಗೂ ಅಭಿನಂಧನಾ ಸಮಾರಂಭದ ಅಂಗವಾಗಿ ಭಾವಚಿತ್ರ ಮೆರವಣಿಗೆಯನ್ನು ನೀಲಕಂಠೇಶ್ವರ ದೇವಸ್ಥಾನದಿಂದ ನಡೆಸಲಾಗುತ್ತಿದ್ದು, ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಭಾಗವಹಿಸಿ, ಮೆರವಣಿಗೆಗೆ ವಿಶೇಷ ಮೆರಗು ತರಲಿದ್ದಾರೆ.

# ಬೈಕಿಗೆ ಟ್ರ್ಯಾಕ್ಟರ್ ಡಿಕ್ಕಿ ಸ್ಥಳದಲ್ಲೆ ಒಂದು ಸಾವು




» **ಹೊಸದುರ್ಗ**

ಎದುರುಗಡೆಯಿಂದ ಬರುತಿದ್ದ ಬೈಕಿಗೆ ಟ್ರ್ಯಾಕ್ಟರ್ ಡಿಕ್ಕಿ ಪಡಿಸಿ ಒಮ್ಮೆಲೆ ಬ್ರೇಕ್ ಹಾಕಿದ ಪರಿಣಾಮ ಟ್ರ್ಯಾಕ್ಟರ್ ಚಾಲಕನ ನಿತಂಯ್ರಣ ತಪ್ಪಿ ಟ್ರ್ಯಾಕ್ಟರ್ ಪಲ್ಟಿಯಾದ ಪರಿಣಾಮ ಓರ್ವ ಮಹಿಳೆ ಸ್ಥಳದಲ್ಲೆ ಸಾವನ್ನಪ್ಪಿದ್ದು ಮತ್ತೋರ್ವ ಮಹಿಳೆ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿರುವ ಘಟನೆ ತಾಲೂಕಿನ ಮತ್ತೋಡು ಸಮೀಪ ಭಾನುವಾರ ಸಂಭವಿಸಿದೆ.

ಮೃತ ಮಹಿಳೆಯನ್ನು ತಾಲೂಕಿನ ಮಲ್ಲಾಪುರ ಗ್ರಾಮದ ಕೆಂಚಪ್ಪ ಎಂಬುವವರ ಪತ್ನಿ ಕರಿಯಮ್ಮ (50) ಎಂದು ತಿಳಿದು ಬಂದಿದ್ದು ಮೃತ ಕೆಂಚಮ್ಮ, ನೇತ್ರಾವತಿ ಮತ್ತು ಕರಿಯಮ್ಮನ ಅಳಿಯ ಬಸವರಾಜ ಎಂಬುವವರು ಮೂರು ಮಂದಿ ಒಂದೇ ಬೈಕಿನಲ್ಲಿ ಮಲ್ಲಾಪುರದಿಂದ ಅಜ್ಜಯನಹಟ್ಟಿ ಗ್ರಾಮದಲ್ಲಿ ನಡೆಯುತ್ತಿದ್ದ ಜಾತ್ರೆಗೆ ಬರುತಿದ್ದ ಸಂಧರ್ಬದಲ್ಲಿ ಇಳಿಜಾರಿನಲ್ಲಿ ಬರುತಿದ್ದ ಬೈಕಿಗೆ ರಭಸವಾಗಿ ಟ್ರ್ಯಾಕ್ಟರ್ ಡಿಕ್ಕಿ ಹೊಡೆದ ಪರಿಣಾಮ ಈ ಘಟನೆ ಸಂಭವಿಸಿದ್ದು ಬೈಕ್ ಚಾಲಕ ಪ್ರಾಣಾಪಾಯದ ಪಾರಾಗಿದ್ದಾನೆ ಎಂದು ಪೋಲಿಸರು ಮಾಹಿತಿ ನೀಡಿದ್ದು ಈ ಬಗ್ಗೆ ಶ್ರೀರಾಂಪುರ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹೊಟ್ಟೆಪ್ಪನಹಳ್ಳಿ-ಕಮ್ಮತ್‌ಮರಿಕುಂಟೆ; ಕಾರು-ಬೈಕ್ ನಡುವೆ ಡಿಕ್ಕಿ : ಬೈಕ್‌ಸವಾರ ಸ್ಥಳದಲ್ಲೇ ಸಾವು



**ಚಳ್ಳಕೆರೆ ತಾಲ್ಲೂಕಿನ ಹೊಟ್ಟೆಪ್ಪನಹಳ್ಳಿ–ಕಮ್ಮತ್‌ಮರಿಕುಂಟೆ ಗ್ರಾಮದ ಮಧ್ಯದಲ್ಲಿ ನಡೆದ ಬೈಕ್– ಕಾರು ಅಪಘಾತದಲ್ಲಿ ಕಾರು ನಜ್ಜುಗುಜ್ಜಾಗಿರುವುದು.**

» **ಚಳ್ಳಕೆರೆ**

ನಗರದ ಬೆಂಗಳೂರು ರಸ್ತೆಯ ರಾಷ್ಟ್ರೀಯ ಹೆದ್ದಾರಿ ಹೊಟ್ಟೆಪ್ಪನಹಳ್ಳಿ–ಕಮ್ಮತ್‌ಮರಿಕುಂಟೆ ಗ್ರಾಮದ ಮಧ್ಯದಲ್ಲಿ ರಾತ್ರಿ 8ರ ಸಮಯದಲ್ಲಿ ಕಾರು ಹಾಗೂ ಮೋಟಾರ್ ಬೈಕ್ ನಡುವೆ ಡಿಕ್ಕಿ ಸಂಭವಿಸಿ ಚಳ್ಳಕೆರೆ ಗಾಂಧಿನಗರ ನಿವಾಸಿ ಆನಂದ(40) ಸ್ಥಳದಲ್ಲೇ ಮೃತಪಟ್ಟಿರುತ್ತಾನೆ.

ಮೃತ ಆನಂದ ಸಾಣೀಕೆರೆ ಗ್ರಾಮದಲ್ಲಿ ಸೆಲೂನ್‌ಶಾಪ್ ನಡೆಸುತ್ತಿದ್ದು, ಪ್ರತಿನಿತ್ಯ ಚಳ್ಳಕೆರೆ ಗಾಂಧಿನಗರದಿಂದ ಸಾಣೀಕೆರೆಗೆ ಮೋಟಾರ್ ಬೈನಲ್ಲಿ ಪ್ರಯಾಣಿಸುತ್ತಿದ್ದ ಭಾನುವಾರ ರಾತ್ರಿ ಸಾಣೀಕೆರೆ ಗ್ರಾಮದಿಂದ ಚಳ್ಳಕೆರೆ ಕಡೆಗೆ ಬರುವ ಸಂದರ್ಭದಲ್ಲಿ ಕಾರು ಈತನ ಬೈಕ್‌ಗೆ ಡಿಕ್ಕಿ ಪಡಿಸಿದ್ದು, ತೀರ್ವವಾಗಿ ಗಾಯಗೊಂಡ ಆನಂದ ಸ್ಥಳದಲ್ಲೇ ಮೃತಪಟ್ಟಿರುತ್ತಾನೆ.

**ಪ್ರಮುಖ ಸುದ್ದಿ**

# ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ನೂತನ ಮಳಿಗೆ, ಕಾಂಪೌಂಡ್ ನಿರ್ಮಾಣ, ಸಿ.ಸಿ. ರಸ್ತೆ ಕಾಮಗಾರಿಗೆ ಶಾಸಕ ಡಾ.ಎಂ.ಚಂದ್ರಪ್ಪ ಚಾಲನೆ

» **ಹೊಳಲ್ಕೆರೆ**

ರೈತರುವರ್ತಕರಿಗೆಅನುಕೂಲವಾಗಲೆಂದು ದೊಡ್ಡ ಮಾರುಕಟ್ಟೆ ಕಟ್ಟಲಾಗಿದೆ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ಐದು ಕೋಟಿ ರೂ.ವೆಚ್ಚದಲ್ಲಿ ಹದಿನಾರು ನೂತನ ಮಳಿಗೆ ಎರಡು ಕೋಟಿ ರೂ. ವೆಚ್ಚದಲ್ಲಿ ಕಾಂಪೌಂಡ್ ನಿರ್ಮಾಣ ಮತ್ತು ಸಿ.ಸಿ.ರಸ್ತೆ ಕಾಮಗಾರಿಗೆ ಶನಿವಾರ ಚಾಲನೆ ನೀಡಿ ಮಾತನಾಡಿದರು.

ಸುಮಾರು ನೂರು ಮೀ. ಎತ್ತರದಲ್ಲಿದ್ದ ಗುಡ್ಡವನ್ನು ಕಡಿದು ಸಮ ಮಾಡಿ 250 ಕೋಟಿ ರೂ.ಗಳಿಗೂ ಹೆಚ್ಚು ಖರ್ಚು ಮಾಡಿ ರೈತರಿಗೆ ಅನುಕೂಲವಾಗಲಿ ಎಂದು ಹೊಸ ಕಟ್ಟಡಗಳನ್ನು ಕಟ್ಟಲಾಗಿದೆ. ಈ ಹಿಂದೆ ರೈತರು ಹೊಸದುರ್ಗಕ್ಕೆ ಹೋಗಬೇಕಿತ್ತು. ಅದನ್ನು ಮನಗಂಡು ಇಲ್ಲಿಯೇ ತಮ್ಮ ವ್ಯಾಪಾರ ವಹಿವಾಟುಗಳನ್ನು ನಡೆಸಿಕೊಳ್ಳಲು ಅವಕಾಶ ಮಾಡಿಕೊಡಲಾಗಿದೆ. ಮುಂದಿನ



**ಕೃಷಿ ಉತ್ಪನ್ನ ಮಾರುಕಟ್ಟೆ ಆವರಣದಲ್ಲಿ ನೂತನ ಮಳಿಗೆ, ಕಾಂಪೌಂಡ್ ನಿರ್ಮಾಣ, ಸಿ.ಸಿ. ರಸ್ತೆ ಕಾಮಗಾರಿಗೆ ಶಾಸಕ ಡಾ.ಎಂ. ಚಂದ್ರಪ್ಪನವರಿಂದ ಭೂಮಿ ಪೂಜೆ.**

ದಿನಗಳಲ್ಲಿ ರೈತರಿಗೆ ಊಟ, ತಿಂಡಿ ಹಾಗೂ ಉಳಿದುಕೊಳ್ಳಲು ವಸತಿ ಕಲ್ಪಿಸುವ ಚಿಂತನೆಯಿದೆ ಎಂದು ತಿಳಿಸಿದರು.

ಎ.ಪಿ.ಎಂ.ಸಿ.ಗೆ ಇದುವರೆವಿಗೂ ನಲವತ್ತು ಕೋಟಿ ರೂ.ಗಳಿಗೂ ಹೆಚ್ಚು ಹಣ ಖರ್ಚು ಮಾಡಲಾಗಿದೆ. ಮಕ್ಕಳ ಶಿಕ್ಷಣಕ್ಕಾಗಿ ಹದಿಮೂರು ಕೋಟಿ ರೂ. ಗಳಲ್ಲಿ ಎರಡು ಹೊಸ ಹಾಸ್ಟೆಲ್‌ಗಳನ್ನು ನಿರ್ಮಾಣ ಮಾಡಲಾಗುವುದು. ಹತ್ತು ಕೋಟಿ ರೂ. ವ್ಯಯಿಸಿ ಐ.ಟಿ.ಐ. ಕಾಲೇಜು ಕಟ್ಟಲು ಮುಂದಿನ ವಾರ ಭೂಮಿ ಪೂಜೆ ನೆರವೇರಿಸಲಾಗುವುದು ಎಂದರು.

ನನ್ನ ಕ್ಷೇತ್ರದಲ್ಲಿ ಸಾರ್ವಜನಿಕರಿಂದ ಏನನ್ನು ಹೇಳಿಸಿಕೊಳ್ಳದೆ ಹುಡುಕಿ ಹುಡುಕಿ ಕೆಲಸ ಮಾಡಿದ್ದೇನೆ. ರೈತರು ಬೆಳೆದ ಬೆಳೆಗಳನ್ನು ಎಲ್ಲಿ ಬೇಕಾದರೂ ಮಾರಾಟ ಮಾಡಿಕೊಳ್ಳಬಹುದು ಎನ್ನುವ ಕಾನೂನನ್ನು ಕೇಂದ್ರ ಸರ್ಕಾರ ಜಾರಿಗೆ ತಂದಿತ್ತು. ಆಗ ವಿರೋಧ ವ್ಯಕ್ತವಾಗಿದ್ದರಿಂದ ಹಿಂದಕ್ಕೆ ಪಡೆದಿದೆ. ಕಳೆದ ಎಪ್ಪತ್ತು ವರ್ಷಗಳಿಂದಲೂ ರೈತರಿಗೆ ಸರಿಯಾದ ಮಾರುಕಟ್ಟೆ ಇರಲಿಲ್ಲ ಎನ್ನುವುದನ್ನು ಗಮನಿಸಿ ಪಟ್ಟಣದ ಹೊರವಲಯದಲ್ಲಿ ಹೊಸ ಕಟ್ಟಡಗಳನ್ನು ನಿರ್ಮಿಸಿದ್ದೇನೆ. ತಾಲ್ಲೂಕಿನ ರೈತರು ಇದರ ಪ್ರಯೋಜನ ಪಡೆದುಕೊಳ್ಳಬೇಕೆಂದು ಶಾಸಕ ಡಾ.ಎಂ. ಚಂದ್ರಪ್ಪ ವಿನಂತಿಸಿದರು.

ಎ.ಪಿ.ಎಂ.ಸಿ. ಮಾಜಿ ಅಧ್ಯಕ್ಷ ಅಂಕಳಪ್ಪ, ಕುಮಾರಣ್ಣ, ಮಾಜಿ ಉಪಾಧ್ಯಕ್ಷ ದಾಸಯ್ಯನಹಟ್ಟಿ ರಮೇಶ್, ಸದಸ್ಯ ಮರುಳಸಿದ್ದಪ್ಪ, ಹೊಳಲ್ಕೆರೆ ಕೃಷಿ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಜಿ.ಎಸ್.ಸುರೇಶ್, ಇಂಜಿನಿಯರ್‌ಗಳಾದ ಪುಟ್ಟರಾಜು, ರುದ್ರೇಶ್‌ನಾಯ್ಕ, ಪ್ರವೀಣ್, ಮಹೇಶ್‌ನಾಯ್ಕ ಇನ್ನಿತರರು ಈ ಸಂದರ್ಭದಲ್ಲಿ ಹಾಜರಿದ್ದರು.



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ರೇಣುಕಾಯಲ್ಲಮ್ಮ ದೇವಿ ಜಾತ್ರೆ



» ಚಿತ್ರದುರ್ಗ

ನಗರದ ಹೊಳಲ್ಕೆರೆ ರಸ್ತೆಯ ಶಾರದಮ್ಮ ಆರ್.ಎಸ್.ರುದ್ರಪ್ಪ ಕಲ್ಯಾಣ ಮಂಟಪದ ಪಕ್ಕದಲ್ಲಿರುವ ಸವದತ್ತಿ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನದಲ್ಲಿ ಶನಿವಾರ ಭರತ ಹುಣ್ಣಿಮೆ ಅಂಗವಾಗಿ 77ನೇ ವರ್ಷದ ಶ್ರೀ ರೇಣುಕಾಯಲ್ಲಮ್ಮದೇವಿ ಜಾತ್ರಾ ಮಹೋತ್ಸವ ಅದ್ದೂರಿಯಾಗಿ ನೆರವೇರಿತು. ಶ್ರೀ ರೇಣುಕಾಯಲ್ಲಮ್ಮ ದೇವಿಗೆ (ಜಡೇಯಲ್ಲಮ್ಮ) ಪಂಚಾಮೃತ ಅಭಿಷೇಕ, ಸಹಸ್ರ ಬಿಲ್ವಾರ್ಚನೆ, ಪುಷ್ಪ ಅಲಂಕಾರದೊಂದಿಗೆ ವಿಶೇಷ ದರ್ಶನ ಹಾಗೂ ಶ್ರೀದೇವಿಗೆ ಮಡ್ಲಕ್ಕಿ ಮತ್ತು ಪಡ್ಡಲಿಗೆ ತುಂಬಿಸಿಲಾಯಿತು. ಜಾತ್ರಾ ಮಹೋತ್ಸವದ ಅಂಗವಾಗಿ ಭಕ್ತಾಧಿಗಳು ಮುಂಜಾನೆಯಿಂದಲೇ ದೇಗುಲಕ್ಕೆ ಆಗಮಿಸಿ ಶ್ರೀದೇವಿಯ ದರ್ಶನ ಪಡೆದರು.

### ನೇಮಕ

» ಚಿತ್ರದುರ್ಗ



ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಪ್ರಕಾರ 94 ಎ(1) ರ ಅನ್ವಯ ಬಗರ್‌ಹುಕುಂ ಸಾಗುವಳಿ ಸಕ್ರಮೀಕರಣ ಸಮಿತಿಯನ್ನು ರಚಿಸಿ ಸರ್ಕಾರದ ಅಧೀನ ಕಾರ್ಯದರ್ಶಿ ಕಂದಾಯ ಇಲಾಖೆಯ ಜಗದೀಶ್ ಕೆ. ಆದೇಶ ಹೊರಡಿಸಿದ್ದಾರೆ. ಅಧ್ಯಕ್ಷರಾಗಿ ಚಿತ್ರದುರ್ಗ ಕ್ಷೇತ್ರದ ಶಾಸಕ ಕೆ.ಸಿ.ವೀರೇಂದ್ರಪಪ್ಪಿ, ಸದಸ್ಯರುಗಳಾಗಿ ಪರಿಶಿಷ್ಟ ಜಾತಿಯ ಮೂಡಲಗಿರಿಯಪ್ಪ ಎಸ್. ಸಾಮಾನ್ಯ ವರ್ಗದ ರಾಜ್‌ಕುಮಾರ್ ಎಸ್. ಶ್ರೀಮತಿ ಪೂಜಾ ಎಸ್. ಇವರುಗಳನ್ನು ಮುಂದಿನ ಆದೇಶದವರೆಗೆ ನೇಮಿಸಿ ಸಮಿತಿ ರಚಿಸಲಾಗಿದೆ.

### ಯುವನಿಧಿ ಪ್ರತಿ ತಿಂಗಳು ಸ್ವಯಂ ಘೋಷಣೆ ಕಡ್ಡಾಯ

#### ಫೆ.29 ರೊಳಗೆ ಸ್ವಯಂಘೋಷಣೆ ಅಪ್‌ಲೋಡ್ ಮಾಡಲು ಸೂಚನೆ

» ಬೆಂಗಳೂರು

ಕರ್ನಾಟಕ ರಾಜ್ಯದ ಮಹತ್ವಾಕಾಂಕ್ಷಿ ಯೋಜನೆಯಾದ "ಯುವನಿಧಿ" ಯೋಜನೆಯ ಸೌಲಭ್ಯವನ್ನು ಪಡೆಯಲು ಫಲಾನುಭವಿಗಳು ಪ್ರತಿ ತಿಂಗಳು ಸ್ವಯಂ ಘೋಷಣೆ ಮಾಡಬೇಕು ಎಂದು ಸೂಚನೆ ನೀಡಲಾಗಿದೆ. ಯುವನಿಧಿ" ಯೋಜನೆಯಲ್ಲಿ ಪದವಿ, ಸ್ನಾತಕೊತ್ತರ ಪದವಿ ಮತ್ತು ಡಿಪ್ಲೊಮಾಗಳನ್ನು 2022-23ನೇ ಶೈಕ್ಷಣಿಕ ವರ್ಷದಲ್ಲಿ ವ್ಯಾಸಂಗ ಮಾಡಿ 2023ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಈಗಾಗಲೇ ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿಯಾಗಿದ್ದು ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನವರಿ 2024 ರಂದು ನೇರ ನಗದು ವರ್ಗಾವಣೆ ಮಾಡಲಾಗಿರುತ್ತದೆ. ಅಭ್ಯರ್ಥಿಗಳು ಈ ಪ್ರಯೋಜನವನ್ನು ಪ್ರತಿ ತಿಂಗಳು ಪಡೆಯಬೇಕಿದ್ದರೆ, ಪ್ರತಿ ಮಾಹೆಯಲ್ಲಿ ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಲ್ಲವೆಂದು ಸ್ವಯಂ ಘೋಷಣೆಯನ್ನು ಮಾಡಬೇಕಾಗಿರುತ್ತದೆ.

ಪ್ರಸ್ತಕ ಫೆಬ್ರವರಿ ಮಾಹೆಯಲ್ಲಿ ದಿನಾಂಕ: 29-02-2024 ರವರೆಗೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಸ್ವಯಂ ಘೋಷಣೆ ಪ್ರಮಾಣ ಪತ್ರವನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಪ್ರಯೋಜನೆ ಪಡೆಯುತ್ತಿರುವ ಅರ್ಹ ಅಭ್ಯರ್ಥಿಗಳು ಪ್ರತಿ ತಿಂಗಳು ಸ್ವಯಂ ಘೋಷಣೆ ಮಾಡದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆಯನ್ನು ಮಾಡಲಾಗುವುದಿಲ್ಲ ಎಂಬುದಾಗಿ ತಿಳಿಯಪಡಿಸಲಾಗಿದೆ. ಈಗಾಗಲೇ ನೋಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ಜನವರಿ 2024ರಲ್ಲಿನೇರನಗದುವರ್ಗಾವಣೆಮಾಡಲಾಗಿದ್ದು, ಮುಂದಿನ ತಿಂಗಳು ಪ್ರಯೋಜನ ಪಡೆದುಕೊಳ್ಳಲು ಸ್ವಯಂ ಘೋಷಣೆ ಮಾಡಬೇಕಾಗಿರುವ ಕುರಿತು ಎಸ್‌ಎಂಎಸ್ ಸಂದೇಶವನ್ನು ಅಭ್ಯರ್ಥಿಗಳಿಗೆ ರವಾನಿಸಲಾಗಿರುತ್ತದೆ. ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆಯನ್ನು ಹೊಂದಿರತಕ್ಕದ್ದು. ಅಭ್ಯರ್ಥಿಗಳು ಸ್ವಯಂ ಘೋಷಣೆ ಮಾಡಿಕೊಳ್ಳಲು https://sevasindhugs.karnataka.gov.in ವೆಬ್‌ಸೈಟ್ ವೀಕ್ಷಿಸಬಹುದು,ಹೆಚ್ಚಿನ ವಿವರಗಳಿಗೆ ದೂ.ಸಂಖ್ಯೆ 080-25189112 ಸಂಪರ್ಕಿಸಬಹುದು ಎಂದು ಎಂದು ಕೈಗಾರಿಕಾ ತರಬೇತಿ ಹಾಗೂ ಉದ್ಯೋಗ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕೊಡುಗೆ ಅಪಾರ

# ಪರಿಶಿಷ್ಟ ವರ್ಗದ ಕಲ್ಯಾಣಕ್ಕಾಗಿ ಮೀಸಲಾತಿ ಸೌಲಭ್ಯ ಕಲ್ಪಿಸಿದ ಕೀರ್ತಿ ಬಿಜೆಪಿ ಸರ್ಕಾರದ್ದು

» ಚಳ್ಳಕೆರೆ

ಕಳೆದ ಸುಮಾರು 9 ತಿಂಗಳಿನಿಂದ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಪರಿಶಿಷ್ಟ ಜಾತಿ, ವರ್ಗಕ್ಕೆ ಮೀಸಲಿಟ್ಟ ಸುಮಾರು 17 ಸಾವಿರ ಕೋಟಿ ಹಣವನ್ನು ಆ ಸಮುದಾಯಗಳಿಗೆ ಖರ್ಚು ಮಾಡದೆ ಬೇರೆ ಕಾರ್ಯಕ್ಕೆ ಉಪಯೋಗಿಸುವ ಮೂಲಕ ಎರಡೂ ವರ್ಗಗಳಿಗೆ ಅನ್ಯಾಯವೆಸಗಿದ್ದಾರೆ. ರಾಜ್ಯದಲ್ಲಿ ಪರಿಶಿಷ್ಟ ವರ್ಗ, ಪರಿಶಿಷ್ಟ ಜಾತಿ ಸಮುದಾಯಗಳಿಗೆ ಯಾವುದೇ ಸೌಲಭ್ಯ ನೀಡದೆ ವಂಚನೆ ಮಾಡುತ್ತಿದ್ದಾರೆಂದು ವಾಲ್ಮೀಕಿ ಸಮುದಾಯದ ಹಿರಿಯ ಮುಖಂಡ, ಮಾಜಿ ಶಾಸಕ ಎಸ್. ತಿಪ್ಪೇಸ್ವಾಮಿ ಆರೋಪಿಸಿದರು.

ಅವರು, ಶನಿವಾರ ವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಜಿಜೆಪಿ ಎಸ್ಟಿ ಮೋರ್ಚಾ ಹಮ್ಮಿಕೊಂಡಿದ್ದ ಪರಿಶಿಷ್ಟ ಪಂಗಡಗಳ ಮುನ್ನಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕಳೆದ 2018ರ ವಿಧಾನಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ ಅಧಿಕಾರದಿಂದ ವಂಚಿತವಾದರು ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಜಗದೀಶ್‌ಶೆಟ್ಟರ್‌ರವರ ಮಾರ್ಗದರ್ಶನದಲ್ಲಿ ಪಕ್ಷ ಸಂಘಟನೆ ಚುರುಕಾಗಿದೆ. ವಿಶೇಷವಾಗಿ ರಾಜ್ಯದ ಬಿಜೆಪಿ ಅಧ್ಯಕ್ಷ ಸ್ಥಾನ ವಹಿಸಿಕೊಂಡ ಬಿ.ವೈ.ವಿಜಯೇಂದ್ರ ರಾಜ್ಯ 25ಕ್ಕೂ ಹೆಚ್ಚು ಲೋಕಸಭಾ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲು ಸಾಕಷ್ಟು ಪರಿಶ್ರಮವಹಿಸುತ್ತಿದ್ದು, ಎಸ್ಟಿ ಜನಾಂಗಕ್ಕೆ ಮೀಸಲಾತಿ ಸೌಲಭ್ಯ ಒದಗಿಸಿದ ಬಿಜೆಪಿಯ ಬಗ್ಗೆ ನಾವೆಲ್ಲರೂ ಜಾಗೃತರಾಗುವುದಲ್ಲದೆ, ಎಲ್ಲರನ್ನೂ ಜಾಗೃತಗೊಳಿಸಬೇಕು ಎಂದರು.



ಕಾರ್ಯಕ್ರಮ ಉದ್ದೇಶಿಸಿ ದಿಕ್ಸೂಚಿ ಭಾಷಣ ಮಾಡಿದ ವಿಚಾರವಾದಿ ವಾದಿರಾಜ್, ಕಳೆದ ಹಲವಾರು ದಶಕಗಳಿಂದ ರಾಜ್ಯವನ್ನು ಆಳಿದ ಯಾವುದೇ ಸರ್ಕಾರಗಳು ಪರಿಶಿಷ್ಟ ಪಂಗಡವೂ ಸೇರಿದಂತೆ ಪರಿಶಿಷ್ಟ ಜಾತಿ, ವರ್ಗಗಳ ಮೀಸಲಾತಿ ಹೆಚ್ಚಳ ಮಾಡದೆ ನಿರ್ಲಕ್ಷ್ಯ ವಹಿಸಿದ್ದರು. ವಿಶೇಷವಾಗಿ ರಾಜ್ಯದಲ್ಲಿ ಪರಿಶಿಷ್ಟ ಪಂಗಡ ಸಮುದಾಯ ಪ್ರಬಲ ಸಮುದಾಯವಾಗಿದ್ದು, ಎಲ್ಲಾ ಕ್ಷೇತ್ರಗಳಲ್ಲೂ ತನ್ನನ್ನು ಗುರುತಿಸಿಕೊಳ್ಳುವ ಕೆಲಸ ಮಾಡುತ್ತಿದೆ ಎಂದರು.

ವಾಲ್ಮೀಕಿ ಸಮುದಾಯದಲ್ಲಿ ಜನಿಸಿ ವಿಶ್ವವೇ ಮೆಚ್ಚುವಂತಹ ರಾಮಾಯಣ ಕರ್ತೃ ಮಹರ್ಷಿ ವಾಲ್ಮೀಕಿಯವರು ಈ ಸಮುದಾಯದ ಧಾರ್ಮಿಕ ಮಾರ್ಗದರ್ಶಕರು. ಕೇವಲ ನಾಯಕ ಸಮುದಾಯಕಷ್ಟೆಯಲ್ಲದೆ ಸಮಾಜದ ಎಲ್ಲಾ ವರ್ಗಗಳಿಗೂ ನ್ಯಾಯವನ್ನು ದೊರಕಿಸಿಕೊಡುವ ನಿಟ್ಟಿನಲ್ಲಿ ಅವರು ಕಾರ್ಯನಿರ್ವಹಿಸಿದ್ದಾರೆ. ಆದರೆ, ರಾಜ್ಯವನ್ನು ಬಹುವರ್ಷಗಳ ಕಾಲ ಆಳಿದ ಪಕ್ಷ ವಾಲ್ಮೀಕಿ ಸಮುದಾಯವನ್ನು ಜನಸಮೂಹದಲ್ಲಿ ಗುರುತಿಸಿಕೊಳ್ಳುವಂತೆ ಮಾಡುವಲ್ಲಿ ವಿಫಲವಾಗಿತ್ತು ಎಂದು ತಿಳಿಸಿದರು.

ಬಿಜೆಪಿ ಆಡಳಿತದಲ್ಲಿ ಈ ಜನಾಂಗದ ಮೀಸಲಾತಿಹೆಚ್ಚಳವಷ್ಟೇಯಲ್ಲದೆ,ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಗೂ ಸಹ ಅವಕಾಶ ನೀಡಿ ಈ ಸಮುದಾಯವೂ ಸಹ ಮುನ್ನಡೆಯತ್ತ ಹೆಜ್ಜೆ ಇಡಲು ಅವಕಾಶ ಮಾಡಿಕೊಡಲಾಯಿತು. ಆದ್ದರಿಂದ ನಾವೆಲ್ಲರೂ ಇಂದು ಪರಿಶಿಷ್ಟ ವರ್ಗಗಳ ಮುನ್ನಡೆ ಕಾರ್ಯಕ್ರಮದ ಮೂಲಕ ಬಿಜೆಪಿ ಸರ್ಕಾರದ ಕೊಡುಗೆಯನ್ನು ನೆನಪಿಸಿಕೊಳ್ಳುವಂತಾಗಿದೆ. ಧಾರ್ಮಿಕ ಕ್ಷೇತ್ರವೂ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಬಿಜೆಪಿ ಸರ್ಕಾರ ಅನೇಕ ಕೊಡುಗೆ ನೀಡುವಮೂಲಕ ಜನರನ್ನು ತಲುಪುವಲ್ಲಿ ಯಶಸ್ವಿಯಾಗಿದೆ ಎಂದರು.

ಎಸ್ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು ಮಾತನಾಡಿ, ರಾಜ್ಯವನ್ನು ಎರಡು ಅವಧಿಯಲ್ಲಿಬಿಜೆಪಿ ಸರ್ಕಾರ ಆಡಳಿತ ನಡೆಸಿದೆ. ಈ ಹಿಂದೆ ಜೆಡಿಎಸ್ ಮೈತ್ರಿಯೊಂದಿಗೆ ಆಡಳಿತ ನಡೆಸಿದ ಬಿಜೆಪಿ 2020-23ರ ತನಕ ಮತ್ತೊಮ್ಮೆ ರಾಜ್ಯವನ್ನು ಆಡಳಿತ ನಡೆಸಿ ಹಲವಾರು ಯೋಜನೆ ಬಡವರಿಗಾಗಿ ನೀಡಿದೆ. ಬಡವರು, ದುರ್ಬಲರು, ಮಹಿಳೆಯರು, ಯುವಕ, ಸ್ತ್ರೀಸಾಮಾನ್ಯರಿಗೆ ಅನೇಕ ಸೌಲಭ್ಯ ಕಲ್ಪಿಸಿ ಅವರ ಬದುಕಿಗೆ ಉತ್ತಮ ಮಾರ್ಗವನ್ನು ತೋರಿಸಿದೆ. ಮುಂಬರುವ ದಿನಗಳಲ್ಲೂ ಸಹ ಬಿಜೆಪಿ ಉತ್ತಮ ಆಡಳಿತ ನೀಡುವ ಮೂಲಕ ಜನರ ಸೇವೆ ಮಾಡಲಿದೆ. ಪರಿಶಿಷ್ಟ ಪಂಗಡದ ನೇತಾರರು ಬಿಜೆಪಿ ಸಾಧನೆಯಬಗ್ಗೆ ಹೆಚ್ಚು ಪ್ರಚಾರ ಕೈಗೊಳ್ಳಿ ಎಂದರು.

ಕಾರ್ಯಕ್ರಮ ಉದ್ದೇಶಿಸಿ ಶ್ರೀನಿವಾಸ್‌ದಾಸರಕರಿಯಪ್ಪ, ರಾಜ್ಯ ಎಸ್ಟಿ ಮೋರ್ಚಾ ಉಪಾಧ್ಯಕ್ಷ ಆರ್. ಅನಿಲ್‌ಕುಮಾರ್ ಮುಂತಾದವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಎಸ್ಟಿ ಮೋರ್ಚಾ ಅಧ್ಯಕ್ಷ ಶಿವಣ್ಣ, ಜಿಲ್ಲಾ ಬಿಜೆಪಿ ಅಧ್ಯಕ್ಷ ಎ.ಮುರುಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಆರ್.ಪಾಲಯ್ಯ, ಜಯಪಾಲಯ್ಯ, ದಲಿತ ಮುಖಂಡ ಎಂ.ಶಿವಮೂರ್ತಿ, ದೊರೆಬೈಯಣ್ಣ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಎನ್.ಓಬಳೇಶ್, ಟಿ.ಮಂಜುನಾಥ, ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ರಾಮರೆಡ್ಡಿ, ಜಗದಾಂಭ, ಕವನ, ಪಾಲನೇತ್ರನಾಯಕ, ಹೊಸಮನೆ ಮನೋಜ್, ಈಶ್ವರನಾಯಕ, ಜೆ.ಕೆ.ತಿಪ್ಪೇಶ್, ಮುಂತಾದವರು ಉಪಸ್ಥಿತರಿದ್ದರು.

### ನಗರಸಭೆಗೆ ದಿಢೀರ್ ಭೇಟಿ ನೀಡಿದ ಜಿಲ್ಲಾಧಿಕಾರಿ ವೆಂಕಟೇಶ್

## ಸಾರ್ವಜನಿಕರ ಸಮಸ್ಯೆಗೆ ಸಕರಾತ್ಮಕವಾಗಿ ಸ್ಪಂದಿಸಿ

» ಚಳ್ಳಕೆರೆ

ನಗರಸಭೆ ಕಚೇರಿಗೆ ಆಗಮಿಸುವ ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ ವಿಚಾರಣೆ ನಡೆಸಿ ನಿಯಮದ ಅನುಸಾರ ಅವರಿಗೆ ಸೌಲಭ್ಯಗಳನ್ನು ನೀಡುವಲ್ಲಿ ನಗರಸಭೆ ಅಧಿಕಾರಿಗಳು ಮುಂದಾಗಬೇಕು. ಸಾರ್ವಜನಿಕರನ್ನು ಅಲೆದಾಡಿಸಿದರೆ ಆಡಳಿತಕ್ಕೆ ಕಪ್ಪುಚುಕ್ಕಿ ಎಂದು ಜಿಲ್ಲಾಧಿಕಾರಿ ವೆಂಕಟೇಶ್ ತಿಳಿಸಿದರು.

ಅವರು, ಶನಿವಾರ ಸಂಜೆ ಇಲ್ಲಿನ ನಗರಸಭೆ ಕಚೇರಿಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸಿ ನಂತರ ಪೌರಾಯುಕ್ತ ಸಿ.ಚಂದ್ರಪ್ಪನವರೊಂದಿಗೆ ನಗರಸಭೆ ಕೆಲಸ ಕಾರ್ಯಗಳ ಪ್ರಗತಿಯ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಪಡೆದರು. ಪೌರಾಯುಕ್ತ ಚಂದ್ರಪ್ಪ ಮಾಹಿತಿ ನೀಡಿ, ನಗರಸಭೆಯ ಕಟ್ಟಡ ಇನ್ನೂ ನಿರ್ಮಾಣವಾಗದ ಹಿನ್ನೆಲೆಯಲ್ಲಿ ರಂಗಮಂದಿರಲ್ಲೇ ಕಳೆದ ಮೂರು ವರ್ಷಗಳಿಂದ ಕಚೇರಿ ನಡೆಸಲಾಗುತ್ತಿದೆ ಎಂದರು.

ನೂತನ ಖಾಸಗಿ ಬಸ್ ನಿಲ್ದಾಣ ಕಾಮಗಾರಿ ಅಪೂರ್ಣಗೊಂಡಿದ್ದು ಸರ್ಕಾರದಿಂದ ಹಣ ಬಿಡುಗಡೆಯಾಗಿಲ್ಲವೆಂದರು. ನಗರದ ವಿವಿಧೆಡೆ ಕಾಮಗಾರಿಗಳು ಹಣಕಾಸಿನ ತೊಂದರೆಯಿಂದ ಸ್ಥಗಿತಗೊಂಡಿವೆ ಎಂದರು. ಈ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸುವ ಭರವಸೆಯನ್ನು ನಗರಸಭೆ ಆಡಳಿತಾಧಿಕಾರಿಯಾಗಿರುವ ಜಿಲ್ಲಾಧಿಕಾರಿ ವೆಂಕಟೇಶ್ ನೀಡಿದರು. ಸಹಾಯಕ ಕಾರ್ಯಪಾಲಕ ಅಭಿಯಂತರ ಕೆ.ವಿನಯ್, ಸಹಾಯಕ ಇಂಜಿನಿಯರ್ ಲೋಕೇಶ್ ಮುಂತಾದವರು ಉಪಸ್ಥಿತರಿದ್ದರು.



### ನಿರಂತರ ಪ್ರಯತ್ನದಿಂದ ಗೆಲುವು ಸಾಧ್ಯ: ಡಾ. ಅಕ್ಬರ್ ಖಾನ್



» ದಾವಣಗೆರೆ

ಜೀವನದಲ್ಲಿ ಪ್ರತಿಬಾರಿ ಗೆಲ್ಲಲು ಸಾಧ್ಯವಿಲ್ಲ, ಸೋಲು-ಗೆಲುವು ಎರಡು ಇರುತ್ತದೆ, ಅದನ್ನ ಸಮಾನವಾಗಿ ಸ್ವೀಕರಿಸಬೇಕೆಂದು ಆಯುರ್ವೇದ ವೈದ್ಯರಾದ ಡಾ. ಅಕ್ಬರ್ ಖಾನ್ ತಿಳಿಸಿದರು.ನಗರದ ಪ್ರತಿಷ್ಠಿತ ಶಾಲೆಗಳಲ್ಲೊಂದಾದ ಶ್ರೀ ಸೋಮೇಶ್ವರ ವಿದ್ಯಾಲಯದಲ್ಲಿ ನಡೆದ 2023-24 ನೇ ಸಾಲಿನ ಶಾರದ ಪೂಜಾ ಹಾಗೂ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಆತ್ಮಸ್ಥೈರ್ಯದ ಮಾತುಗಳನ್ನು ಹೇಳಿದರು.ನಮ್ಮ ಬದುಕಿನಲ್ಲಿ ಪ್ರಯತ್ನ-ಪ್ರಮಾದಗಳಿರಬೇಕು, ಸೋಲೆ ಗೆಲುವಿನ ಸೋಪಾನ. ಆದ್ದರಿಂದ ನಾವು ಯಾವಾಗಲು ಪ್ರಯತ್ನ ಮಾಡುವುದನ್ನು ನಿಲ್ಲಿಸಬಾರದು ಎಂದರು. ದೇವರ ಅನುಗ್ರಹ ಹಾಗೂ ಪ್ರಯತ್ನದಿಂದ ಯಶಸ್ಸನ್ನು ಪಡೆಯಬಹುದು. ಉತ್ತಮ ಆರೋಗ್ಯಕ್ಕಾಗಿ ಧನ್ವಂತರಿ ಮಂತ್ರವನ್ನು ರೂಢಿಸಿಕೊಳ್ಳಿ ಹಾಗೂ ಶಾಂತತೆಯನ್ನು ಬೆಳಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.ಆಡಳಿತಾಧಿಕಾರಿ ಹರೀಶ್ ಬಾಬು, ಪ್ರಾಂಶುಪಾಲರಾದ ಪ್ರಭಾವತಿ ಎನ್. ಮುಖ್ಯೋಪಾಧ್ಯಾಯರಾದ ಮಾಲಾ ಪಿ. ಗಾಯತ್ರಿ ಹೆಚ್. ಕೆ. ಪ್ರಕಾಶ್ ಎಂ.ಆರ್. ಹಾಗೂ ಭೋದಕ, ಭೋದಕೇತರ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಬಾಪೂಜಿ ಶಾಲೆಯಲ್ಲಿ ಮಕ್ಕಳ ಸಂತೆ

ಚಿತ್ರದುರ್ಗ: ನಗರದ ಹೊರವಲಯದಲ್ಲಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಮಕ್ಕಳ ಸಂತೆ ಏರ್ಪಡಿಸಲಾಗಿತ್ತು. ಎಲ್.ಕೆ.ಜಿ.ಯಿಂದ ಹತ್ತನೆ ತರಗತಿ ವಿದ್ಯಾರ್ಥಿಗಳು ಹಸಿ ತರಕಾರಿ, ಸೊಪ್ಪು, ಪೌಷ್ಠಿಕಾಂಶವುಳ್ಳ ಕಾಳುಗಳು, ಫ್ರೂಟ್ ಸಲಾಡ್, ತಂಪು ಪಾನೀಯ, ಗೋಬಿ ಮಂಚೂರು ತರಹೆವಾರು ತಿಂಡಿ ತಿನಿಸುಗಳನ್ನು ಮಾರಾಟ ಮಾಡಿದರು. ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ನಿರ್ದೇಶಕ ಚೇತನ್ ಕೆ.ಎಂ. ಮಕ್ಕಳ ಸಂತೆ ವೀಕ್ಷಿಸಿ ಮಾತನಾಡುತ್ತ ಶಿಕ್ಷಣದ ಜೊತೆ ಮಕ್ಕಳಿಗೆ ಕಲಿಕಾ ಚೇತರಿಕೆ, ವ್ಯವಹಾರ ಜ್ಞಾನ ಮೂಡಿಸುವುದು ಮಕ್ಕಳ ಸಂತೆ ಉದ್ದೇಶವಾಗಿದೆ ಎಂದರು.

## ಪ್ರಮುಖ ಸುದ್ದಿ

# ತುರುವನೂರು ಆಂಜನೇಯ ಸ್ವಾಮಿ ರಥೋತ್ಸವ


» ಚಿತ್ರದುರ್ಗ

ಉತ್ತಮ ಮಳೆ ಬೆಳೆಯಾಗಿ ಬರಗಾಲ ದೂರವಾಗಲಿ ಎಂದು ಶ್ರೀ ಆಂಜನೇಯಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥನೆ ಮಾಡಿದ್ದೇನೆ ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು.

ಚಿತ್ರದುರ್ಗ ತಾಲೂಕಿನ ತುರುವನೂರು ಗ್ರಾಮದಲ್ಲಿ ನಡೆದ ಶ್ರೀ ಆಂಜನೇಯ ಸ್ವಾಮಿ ರಥೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿಶೇಷ ಪೂಜೆ ಸಲ್ಲಿಸಿ ಆಂಜನೇಯ ಸ್ವಾಮಿ ಆಶೀರ್ವಾದ ಪಡೆದು ಮಾತನಾಡಿದರು.

ಮಳೆಯಿಲ್ಲದೆ ಜಿಲ್ಲೆಯ ರೈತರು, ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಳೆ ಸುರಿದು ಭೂಮಿ ತಾಯಿ ಮಡಿಲು ತಂಪಾಗಿ, ಉತ್ತಮ ಬೆಳೆ ಆಗಲಿ ಎಂದು ದೇವರಲ್ಲಿ ಪ್ರಾರ್ಥನೆ ಸಲ್ಲಿಸಿದ್ದೇನೆ ಎಂದರು.

ಜಿಲ್ಲೆಯಲ್ಲಿ ಬೇಸಿಗೆಯ ಅವಧಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರುವ ಸಾಧ್ಯತೆಗಳಿದ್ದು,ಕುಡಿಯುವನೀರಿನಸಮಸ್ಯೆ ತಲೆದೋರಬಹುದಾದ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳಿಗೆ ಈಗಾಗಲೇ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ವಹಿಸಲು ಶಾಸಕರು ಸಭೆ ನಡೆಸಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.



ಜಿಲ್ಲೆಯ ಆರು ತಾಲ್ಲೂಕುಗಳು ಈಗಾಗಲೇ ಬರಪೀಡಿತ ತಾಲ್ಲೂಕುಗಳು ಎಂದು ಘೋಷಣೆಯಾಗಿದೆ. ಕುಡಿಯುವ ನೀರಿನ ಸಮಸ್ಯೆಗಳ ಪರಿಹಾರಕ್ಕಾಗಿ ಎಲ್ಲೆಲ್ಲಿ ನೀರಿನ ಮೂಲಗಳಿವೆ, ಪೈಪ್‌ಲೈನ್ ವಿಸ್ತರಣೆ, ಬೋರ್‌ವೆಲ್‌ಗಳ ದುರಸ್ತಿ, ಟ್ಯಾಂಕರ್ ಮೂಲಕ ಪೂರೈಕೆಯ ಮಾಹಿತಿ ಸೇರಿದಂತೆ ಎಲ್ಲಾ ಮಾಹಿತಿ ಪಡೆಯಲು ಟಾಸ್ಕ್ ಫೋರ್ಸ್ ಸಮಿತಿ ರಚಿಸಲಾಗಿದೆ. ನೀರಿನ ಸಮಸ್ಯೆಯಾಗದಂತೆ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿಟ್ಟುಕೊಂಡಿರಬೇಕು. ಮಾಲೀಕರ ಮನವೊಲಿಸಿ ಬಾಡಿಗೆ ನಿಗದಿಪಡಿಸಬೇಕು. ಅಂತಹ ಬೋರ್‌ವೆಲ್‌ಗೆ ಅಗತ್ಯವಿದ್ದರೆ ಪೈಪ್‌ಲೈನ್ ಮಾಡಿಕೊಳ್ಳಬಹುದು.

ಒಂದು ವೇಳೆ ನೀರು ಲಭ್ಯವಾಗದೇ ಇರುವ ಪಕ್ಷದಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವುದು ಕೊನೆಯ ಆದ್ಯತೆಯಾಗಬೇಕು ಎಂದು ತಿಳಿಸಿದರು.

ಚಳ್ಳಕೆರೆ ಕ್ಷೇತ್ರದ ಪ್ರತಿಯೊಂದು ಹಳ್ಳಿಯಿಂದ ಮಾಹಿತಿ ಪಡೆದಿದ್ದು ಅಗತ್ಯ ಯಾವ ಗ್ರಾಮಗಳಿಗೂ ನೀರಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು ಎಂದು ಗ್ರಾಮ ಪಂಚಾಯತಿ ಮಟ್ಟದಲ್ಲಿ ಪಿಡಿಓ ಗಳಿಗೆ ಸೂಚನೆ ನೀಡಿದ್ದೇನೆ. ತಾಲೂಕು ಪಂಚಾಯತಿ ಇಓ ಅವರಿಗೆ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸಿ ಎಂದು ಖಡಕ್ ಸೂಚನೆ ನೀಡಿದ್ದೇನೆ. ಜನರಿಗೆ ನೀರಿನ ಬವಣೆ ಬಾರದಂತೆ ತಡೆಯಲು ಸಕಲ ಸಿದ್ದತೆ ಮಾಡಿಕೊಂಡಿದ್ದೇವೆ ಎಂದರು.ತುರುವನೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ದೀಪಾ ಮಹೇಶ್, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಮುಖಂಡರಾದ ಶುಭಾಸ್ ರೆಡ್ಡಿ, ಮಂಜುನಾಥ, ಗ್ರಾಮ ಪಂಚಾಯತಿ ಸದಸ್ಯರು ಮತ್ತು ಗ್ರಾಮಸ್ಥರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಸಂಸತ್ ಚುನಾವಣೆಯಲ್ಲಿ ಸ್ಥಳೀಯರನ್ನೇ ಗೆಲ್ಲಿಸಿ



» **ಪರಶುರಾಂಪುರ**

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಹೊರಗಿನಿಂದ ಬಂದವರಿಗೆ ಮತವನ್ನ ನೀಡುವುದಿಲ್ಲ ಎಂದು ಮತದಾರರು ಪ್ರತಿಜ್ಞೆ ಮಾಡುವುದರ ಜತೆ ಜಿಲ್ಲೆಯ ಬದ್ಧತೆ ಹಾಗೂ ನೈತಿಕತೆ ಎತ್ತಿಹಿಡಿಯುವಂತೆ ಕಾಂಗ್ರೆಸ್ ಪಕ್ಷದ ಎಸಿಸಿ ಸದಸ್ಯ ಹಾಗೂ ಲೋಕಸಭಾ ಅಭ್ಯರ್ಥಿ ಜೆಜೆ ಹಟ್ಟಿ ಡಾ.ತಿಪ್ಪೇಸ್ವಾಮಿ ತಿಳಿಸಿದರು. ವ್ಯಾಪ್ತಿಯ ಚೌಳೂರು ಗೇಟ್ ಸಮೀಪ ಶನಿವಾರ ಆಯೋಜಿಸಿದ್ದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರ ಜೊತೆ ಆಯೋಜಿಸಿದ್ದ ಸಮಾಲೋಚನಾ ಸಭೆಯಲ್ಲಿ ಮಾತನಾಡಿದರು. ಸ್ಥಳೀಯ ಶಾಸಕರನ್ನ ಗೆಲ್ಲಿಸಿದಂತೆ ಸಂಸದರ ಚುನಾವಣೆಯಲ್ಲಿ ಸ್ಥಳೀಯ ಅಭ್ಯರ್ಥಿಯನ್ನ ಗೆಲ್ಲಿಸುವಂತೆ ಮನವಿಯೊಂದಿಗೆ ಗಡಿಯಲ್ಲಿರುವ ಪರಶುರಾಂಪುರ ಹಾಗೂ ಧರ್ಮಪುರವನ್ನ ತಾಲೂಕು ಕೇಂದ್ರವನ್ನಾಗಿ ಮಾಡಲಾಗುವುದು ಎಂದು ಭರವಸೆ ನೀಡಿದರು. ಮುಖಂಡರ ಚೌಳೂರು ಪ್ರಕಾಶ್ ಮಾತನಾಡಿ, ಹೊರಗಿನಿಂದ ಬಂದ ಸಂಸದರಿಂದ ಇಲ್ಲಿಯ ತನಕ ಅಭಿವೃದ್ಧಿ ಬಗ್ಗೆ ಇಲ್ಲದ ಅಭಿಪ್ರಾಯದ ಜತೆ ಇಚ್ಛಾಶಕ್ತಿ ಕೊರತೆ ಕೊರತೆ ನಡುವೆ ನಮ್ಮೂರು ಎಂಬ ಅಭಿಮಾನದ ಕೊರತೆಯು ಎದ್ದು ಕಾಣುತ್ತಿದೆ. ಡಾ. ತಿಪ್ಪೇಸ್ವಾಮಿಯವರು ನಾಟಕ ಹಬ್ಬ ಡಿಜೆ ಇಂಥವುಗಳಿಗೆ ಒತ್ತು ಕೊಡುವುದಿಲ್ಲ ಅದೇ ಆಸ್ಪತ್ರೆಯಲ್ಲಿದ್ದರೆ, ಮಕ್ಕಳ ಶಿಕ್ಷಣಕ್ಕೆ ಹಣಕಾಸಿನ ತೊಂದರೆ ಇದ್ದರೆ ಹಾಗೂ ಪೊಲೀಸ್ ಠಾಣೆ ಸಂಬಂಧಿಸಿದ ಯಾವುದೇ ವಿಚಾರಗಳಿದ್ದರೆ ನೇರ ತಮ್ಮ ಬಳಿ ಬಂದು ಅನುಕೂಲವನ್ನು ತಲುಪಿಸುವ ಗುಣವನ್ನು ಇಂತಹ ಅಭ್ಯರ್ಥಿಗಳನ್ನು ಜನ ಗೆಲ್ಲಿಸಿದ್ದೇ ಆದರೆ ಕ್ಷೇತ್ರ ಅಭಿವೃದ್ಧಿಯಾಗಲು ಸಾಧ್ಯವಾಗುತ್ತದೆ ಎಂದರು. ನಿಗಮದ ಮಾಜಿ ಅಧ್ಯಕ್ಷ ಶಂಕರಣ್ಣ ಮಾತನಾಡಿ, ಸ್ಥಳೀಯ ಅಭ್ಯರ್ಥಿಗೆ ಟಿಕೆಟ್ ಸಿಗಲಿ ಎಂಬ ಮತದಾರರ ಹಾಗೂ ಅಭಿಮಾನಿಗಳ ಕೂಗು ಕೇಂದ್ರ ಮಟ್ಟಕ್ಕೆ ತಲುಪಿದ್ದು,ಅದು ಡಾ.ತಿಪ್ಪೇಸ್ವಾಮಿಗೆ ಸಿಗಲಿ,ಅವರ ಗೆಲುವಿಗೆ ಶ್ರಮಿಸೋಣ ಎಂದರು.

### ಹಳೇ ಪಿಂಚಣಿ ಯೋಜನೆ ಮರು ಜಾರಿಗೆ ಒತ್ತಾಯ




» **ಚಿತ್ರದುರ್ಗ**

ಹಳೇ ಪಿಂಚಣಿ ಯೋಜನೆ ಮರು ಜಾರಿ, 7ನೇ ವೇತನ ಆಯೋಗದ ವರದಿಯ ಅನುಷ್ಠಾನ ಹಾಗೂ ಆರೋಗ್ಯ ಸಂಜೀವಿನಿ ಯೋಜನೆ ಲೋಕಾರ್ಪಣೆ ಮಾಡುವಂತೆ ಆಗ್ರಹಿಸಿ ಫೆ. 27 ರಂದು ಬೆಂಗಳೂರಿನಲ್ಲಿ ನಡೆಯಲಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಮಹಾಸಮ್ಮೇಳನದಲ್ಲಿ ಸರ್ಕಾರವನ್ನು ಒತ್ತಾಯಿಸಲಾಗುವುದೆಂದು ಜಿಲ್ಲಾಧ್ಯಕ್ಷರಾದ ಕೆ.ಟಿ.ತಿಮ್ಮಾರೆಡ್ಡಿಯವರು ತಿಳಿಸಿದರು.ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಬೆಂಗಳೂರು ಇಲ್ಲಿ ನಡೆಯುತ್ತಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಮಹಾಸಮ್ಮೇಳನದಲ್ಲಿ ರಾಜ್ಯ ಮೂಲೆ ಮೂಲೆಗಳಿಂದ ಸುಮಾರು 2 ರಿಂದ 3 ಲಕ್ಷ ನೌಕರರು ಭಾಗವಹಿಸುತ್ತಿದ್ದು, ಚಿತ್ರದುರ್ಗ ಜಿಲ್ಲೆಯಿಂದ ಸುಮಾರು 5000 ನೌಕರರು ಭಾಗವಹಿಸುವ ನಿರೀಕ್ಷೆಯಿದ್ದು ಸದರಿ ನೌಕರರುಗಳು ಬಸ್, ರೈಲು ಹಾಗೂ ಖಾಸಗಿ ವಾಹನಗಳಲ್ಲಿ ಸಮ್ಮೇಳನಕ್ಕೆ ತೆರಳುತ್ತಿದ್ದಾರೆ. ಬಸ್ ಮೂಲಕ ತೆರಳುವ ನೌಕರರಿಗೆ ಜಿಲ್ಲಾ ಕೇಂದ್ರ ಸ್ಥಾನ ಹಾಗೂ ಆಯಾ ತಾಲ್ಲೂಕು ಕೇಂದ್ರಗಳಲ್ಲಿ ಬಸ್‌ಗಳ ವ್ಯವಸ್ಥೆಯನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ, ಹಾಗೂ ಆಯಾ ತಾಲ್ಲೂಕು ಶಾಖೆಗಳ ವತಿಯಿಂದ ಬಸ್ ವ್ಯವಸ್ಥೆ ಮಾಡಲಾಗಿದೆ ಎಂದರು.ಜಿಲ್ಲಾ ಕೇಂದ್ರ ಚಿತ್ರದುರ್ಗದಿಂದ 20 ಬಸ್ ಹಾಗೂ ಆಯಾ ತಾಲ್ಲೂಕು ಕೇಂದ್ರಗಳಿಂದ ತಲಾ 10 ಬಸ್‌ಗಳು ಒಟ್ಟು 70 ಬಸ್‌ಗಳ ವ್ಯವಸ್ಥೆ ಮಾಡಲಾಗಿದ್ದು ಆಯಾ ತಾಲ್ಲೂಕುಗಳಲ್ಲಿ ಕಾರ್ಯ ನಿರ್ವಹಿಸುವ ನೌಕರರು ತಮ್ಮ ತಮ್ಮ ತಾಲ್ಲೂಕು ಕೇಂದ್ರಗಳ ಮೂಲಕ ಹೊರಡುವ ಬಸ್‌ಗಳಲ್ಲಿ ಸಮ್ಮೇಳನ ಸ್ಥಳಕ್ಕೆ ಹೋಗಬಹುದಾಗಿರುತ್ತದೆ, ಚಿತ್ರದುರ್ಗ ಕೇಂದ್ರ ಸ್ಥಾನದಲ್ಲಿ 20 ಬಸ್‌ಗಳ ವ್ಯವಸ್ಥೆ ಕಲ್ಪಿಸಿದ್ದು, ಐ.ಬಿ.ಮುಂಭಾಗದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಬಸ್ಸುಗಳ ನಿಲುಗಡೆಗೆ ವ್ಯವಸ್ಥೆ ಮಾಡಲಾಗಿದ್ದು,ಫೆ. 27ರ ಮಂಗಳವಾರ ಬೆಳಗ್ಗೆ 6 ಗಂಟೆಗೆ ಬಸ್ ಹೊರಡುವುದರಿಂದ ನೌಕರರು ಸದರಿ ಸ್ಥಳದಲ್ಲಿ ಹಾಜರಿದ್ದು ಸಮ್ಮೇಳನಕ್ಕೆ ಹೋಗಬಹುದಾಗಿರುತ್ತದೆ ಎಂದು ತಿಮ್ಮಾರೆಡ್ಡಿ ತಿಳಿಸಿದ್ದಾರೆ. ಸದರಿ ಸಮ್ಮೇಳನದಲ್ಲಿ ಭಾಗವಹಿಸುವ ನೌಕರರಿಗೆಫೆ. 27ಮತ್ತು28 ಎರಡು ದಿನ ವಿಶೇಷ ಸಾಂದರ್ಭಿಕ ರಜೆಯನ್ನು (ಓ.ಓ.ಡಿ.ಸೌಲಭ್ಯ) ರಾಜ್ಯ ಸರ್ಕಾರ ಮಂಜೂರು ಮಾಡಿ ಆದೇಶ ಹೊರಡಿಸಿದ್ದು ಸಮ್ಮೇಳನದಲ್ಲಿ ಭಾಗವಹಿಸುವ ನೌಕರರು ತಮ್ಮ ಇಲ್ಲಾಖಾ ಮುಖ್ಯಸ್ಥರಿಗೆ ಈ ಬಗ್ಗೆ ಮನವಿ ಸಲ್ಲಿಸಿ ಸೌಲಭ್ಯ ಪಡೆಯಬಹುದಾಗಿರುತ್ತದೆ ಎಂದಿದ್ದಾರೆ.

---

**ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಗೆಲುವು ನಿಶ್ಚಿತ- ಮಾಜಿ ಶಾಸಕ ತಿಮ್ಮರಾಯಪ್ಪ**

# ಮೈತ್ರಿ: ಕಾರ್ಯಕರ್ತರಲ್ಲಿ ಹೊಸ ಉಲ್ಲಾಸ

» **ಚಳ್ಳಕೆರೆ**

ದೇಶದ ಮಾಜಿ ಪ್ರಧಾನಮಂತ್ರಿ ಎಚ್.ಡಿ.ದೇವೇಗೌಡ ನೇತೃತ್ವದ ಪ್ರಬಲ ಪ್ರಾದೇಶಿಕ ಪಕ್ಷ ಜಾತ್ಯಾತೀತ ಜನತಾದಳ ರಾಜ್ಯದಲ್ಲಿ ತನ್ನ ಸಂಘಟನಾ ಶಕ್ತಿಯನ್ನು ವೃದ್ಧಿಸಿಕೊಳ್ಳುತ್ತಿದೆ. ಚಿತ್ರದುರ್ಗ ಜಿಲ್ಲೆ ಜೆಡಿಎಸ್ ಪಕ್ಷದ ಭದ್ರಕೋಟೆಯಾಗಿದ್ದು, ಜೆಡಿಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಜೆಡಿಎಸ್‌ಗೆ ಲೋಕಸಭೆಯಲ್ಲಿ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟರೆ ಈ ಕ್ಷೇತ್ರದಲ್ಲಿ ಅಭ್ಯರ್ಥಿಯ ಗೆಲುವು ಗ್ಯಾರಂಟಿ ಎಂದು ಜಾತ್ಯಾತೀತ ಜನತಾದಳದ ಚಿತ್ರದುರ್ಗ ಲೋಕಸಭಾ ಉಸ್ತುವಾರಿ ಹಾಗೂ ಮಾಜಿ ಶಾಸಕ ತಿಮ್ಮರಾಯಪ್ಪ ತಿಳಿಸಿದರು.

ಅವರು, ಶನಿವಾರ ದಲ್ಲಾಲರ ಸಮುದಾಯ ಭವನದಲ್ಲಿ ಜೆಡಿಎಸ್ ಪಕ್ಷ ಹಮ್ಮಿಕೊಂಡಿದ್ದ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಕಾರ್ಯಕರ್ತರ, ಮುಖಂಡ ಸಭೆಯನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಪ್ರತಿಯೊಂದು ಚುನಾವಣೆಯಲ್ಲಿಯೂ ಕಾರ್ಯಕರ್ತರು ಹಲವಾರು ಸಂದರ್ಭಗಳಲ್ಲಿ ಬದಲಾವಣೆಗೆ ಹೊಂದಿಕೊಳ್ಳ ಬೇಕಾಗುತ್ತದೆ. ಇತ್ತೀಚೆಗೆ ತಾನೇ ಮಾಜಿ ಪ್ರಧಾನಮಂತ್ರಿ ಎಚ್.ಡಿ.ದೇವೇಗೌಡ ನಿರ್ದೇಶನದಂತೆ ಮಾಜಿ ಮುಖ್ಯಮಂತ್ರಿ



ಎಚ್.ಡಿ.ಕುಮಾರಸ್ವಾಮಿ ಬಿಜೆಪಿಯೊಂದಿಗೆ ಮೈತ್ರಿ ಬೆಳೆಸಿರುವುದು ಪಕ್ಷದ ಹಿತದೃಷ್ಟಿಯಿಂದ ಉತ್ತಮ ವಾತಾವರಣ ಎಂದರು. ಜಿಲ್ಲಾಧ್ಯಕ್ಷ ಜಯಣ್ಣ ಮಾತನಾಡಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್ ಗೆಲುವು ಎರಡು ಬಾರಿಯೂ ವಿಫಲವಾಗಿದೆ. ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ. ಆದರೂ ನಮ್ಮ ಅಭ್ಯರ್ಥಿ ಎಂ.ರವೀಶ್‌ಕುಮಾರ್ ಸೋಲನ್ನು ಮರೆತು ಮತ್ತೆ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಲು ಆರಂಭಿಸಿದ್ದಾರೆ. ರಾಜಕೀಯ ಕ್ಷೇತ್ರದಲ್ಲಿ ಸೋಲಿನಿಂದ ಧೃತಿಗೆಡದೆ ಗೆಲುವಿನತ್ತ ಹೆಜ್ಜೆ ಇಡುವ ಸಂಕಲ್ಪ ಮಾಡಬೇಕಾಗುತ್ತದೆ. ಪಕ್ಷದ ಎಲ್ಲಾ ಹಂತದ ಮುಖಂಡರು, ಕಾರ್ಯಕರ್ತರು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಪಕ್ಷ ಹಾಗೂ ಮೈತ್ರಿ ಪಕ್ಷದ ಗೆಲುವಿಗೆ ಸಂಕಲ್ಪ ಮಾಡಬೇಕು ಎಂದರು.

ಸಭೆಯನ್ನು ಉದ್ದೇಶಿಸಿ ಪರಾಜಿತ ಅಭ್ಯರ್ಥಿಗಳಾದ ಎಂ.ರವೀಶ್‌ಕುಮಾರ್, ಎಂ.ರವೀಂದ್ರಪ್ಪ, ಗೌರವಾಧ್ಯಕ್ಷ ಹೆಗ್ಗೆರೆ ಆನಂದಪ್ಪ ಮುಂತಾದವರು ಮಾತನಾಡಿದರು. ಸಭೆಯ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಪಿ.ತಿಪ್ಪೇಸ್ವಾಮಿ ಮಾತನಾಡಿ, ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಪಕ್ಷವನ್ನು ಸಂಘಟಿಸಿ ಚುನಾವಣೆಯಲ್ಲಿ ಗೆಲುವು ಸಾಧಿಸಲು ಕಾರ್ಯಕರ್ತರನ್ನು ಸಜ್ಜುಗೊಳಿಸಲು ಈ ಕಾರ್ಯಕ್ರಮ ಆಯೋಜಿಸಿದೆ. ನಿರೀಕ್ಷೆಗೂ ಮೀರಿ ಹೆಚ್ಚಿನ ಕಾರ್ಯಕರ್ತರು,ಮುಖಂಡರು ಆಗಮಿಸಿರುವುದು ಸಂತಸ ತಂದಿದೆ. ಎಲ್ಲರೂ ಒಟ್ಟಾಗಿ ಪಕ್ಷದ ಅಭ್ಯರ್ಥಿ ಗೆಲುವಿಗೆ ಸಹಕರಿಸೋಣವೆಂದರು.

ಸಭೆಯಲ್ಲಿ ನಗರಸಭಾ ಸದಸ್ಯರಾದ ಪ್ರಮೋದ್, ತಿಪ್ಪಕ್ಕ, ನಾಗಮಣಿ, ಚನ್ನಿಗರಾಯ, ಕಲಮರಹಳ್ಳಿ ಶಿವಣ್ಣ, ಜಡೇಕುಂಟೆ ತಿಪ್ಪೇಸ್ವಾಮಿ, ಹನುಮಂತಪ್ಪ, ಶ್ರೀಧರಚಾರಿ, ಶಿವಣ್ಣ, ಚಂದ್ರಣ್ಣ, ಬಸವರಾಜು, ವೀರಣ್ಣ, ಡಿ.ಟಿ.ಭೂತಲಿಂಗಪ್ಪ, ಸ್ವಾಲೇಹ, ವೀರೇಂದ್ರಪ್ಪ ಉಪಸ್ಥಿತರಿದ್ದರು.

---

## ವೃದ್ಧಾಪ್ಯದಲ್ಲಿ ತಂದೆ-ತಾಯಿಯರಿಗೆ ಆಸರೆಯಾಗಲಿ

» **ದಾವಣಗೆರೆ**

ವೃದ್ಧಾಪ್ಯದಲ್ಲಿ ಮಕ್ಕಳು ತಂದೆ-ತಾಯಿಯರನ್ನು ಪ್ರೀತಿಯಿಂದ ನೋಡಿಸುವ ಅವರ ಬದುಕಿಗೆ ಆಸರೆಯಾಗಬೇಕೆಂದು ಆರ್‌ಜಿಎಸ್ ಸಮೂಹ ಸಂಸ್ಥೆಗಳ ಅಧ್ಯಕ್ಷ ರಾಜನಹಳ್ಳಿ ಜಿ.ಶ್ರೀನಿವಾಸಮೂರ್ತಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಗರದ ಪಿ.ಜೆ.ಬಡಾವಣೆಯಲ್ಲಿರುವ ಈಶ್ವರಮ್ಮ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಪ್ರಶಾಂತಿ ಸಭಾಂಗಣದಲ್ಲಿ ಶನಿವಾರ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಂದ ಅವರ ಪೋಷಕರಿಗೆ ಪಾದಪೂಜೆ ನೇರವೇರಿಸುವ 'ಮಾತಾ-ಪಿತೃ ವಂದನಾ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಇದೊಂದು ಹೃದಯಸ್ಪರ್ಶಿ ಕಾರ್ಯಕ್ರಮ. ಪೋಷಕರಿಗೆ ಪಾದಪೂಜೆ ನೆರವೇರಿಸುವ ಅವಕಾಶ ಎಲ್ಲರಿಗೂ ಸಿಗುವುದಿಲ್ಲ. ಆದರೆ ಈಶ್ವರಮ್ಮ ಶಾಲೆಯಲ್ಲಿ ಓದುತ್ತಿರುವ ಮಕ್ಕಳಿಗೆ ಈ ಅದೃಷ್ಟ ದೊರೆತಿದೆ. ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಇದೊಂದು ಜೀವನದ ತಿರುವಿನಂಶವಾಗಿದೆ ಎಂದರು.ಪೋಷಕರು ಮಕ್ಕಳಿಗೆ ಒತ್ತಡ ಹೇರದೆ, ಯಾವಕ್ಷೇತ್ರದಲ್ಲಿ ಆಸಕ್ತಿ ಇದೆಯೋ ಅದೇಕ್ಷೇತ್ರದಲ್ಲಿ ಮುಂದುವರೆದು ಸಾಧಿಸಲು ಪ್ರೋತ್ಸಾಹಿಸಬೇಕು. ಮಕ್ಕಳು ಎಷ್ಟೇ ಹಣ ಗಳಿಸಿದರೂ, ತಂದೆ-ತಾಯಿಯರಿಗೆ ವೃದ್ಧಾಪ್ಯದಲ್ಲಿ ಪ್ರೀತಿಯ ಆಸರೆಯಾಗಿರಬೇಕು. ಅವರಿಗೆ ಊರುಗೋಲಿನ ಅವಶ್ಯಕತೆ ಬೀಳದಂತೆ, ಅವರನ್ನು ಚೆನ್ನಾಗಿ ನೋಡಿಕೊಳ್ಳಬೇಕೆಂದರು.ವಾಸವಿ ಮಹಿಳಾ ಮತ್ತು ಯುವತಿಯರ ಸಂಘದ ಅಧ್ಯಕ್ಷೆ ಹೇಮಾ ಶ್ರೀನಿವಾಸ ಮಾತನಾಡಿ, ಮಕ್ಕಳು ತಪ್ಪು ಮಾಡುವುದು ಸಹಜ. ಭಾರತೀಯ ಸಂಸ್ಕೃತಿಯಲ್ಲಿ ತಂದೆ-ತಾಯಿಗಳ ಪಾದಕ್ಕೆ ನಮಸ್ಕರಿಸಿ, ಕ್ಷಮೆ ಕೋರುವುದು ವಿಭನ್ನವಾಗಿದೆ. ನಮಸ್ಕಾರ ಎನ್ನುವುದು ತಪ್ಪಿಗೆ ವಿರಾಮವಾಗಬೇಕು; ಪುನರಾವರ್ತನೆಯಾಗಬಾರದು. ಮಕ್ಕಳು ಒಳ್ಳೆಯ ಗುಣಗಳನ್ನು ಬೆಳೆಸಿಕೊಂಡು, ಚೆನ್ನಾಗಿ ಓದಿ ಹೆಚ್ಚು ಅಂಕಗಳನ್ನು ಗಳಿಸಬೇಕೆಂಬುದು ಪ್ರತಿಯೊಬ್ಬ ತಂದೆ-ತಾಯಿಯರ ಆಸೆಯಾಗಿರುತ್ತದೆ. ಮಕ್ಕಳು ಸಂಸ್ಕಾರವಂತರಾಗಿ ಪೋಷಕರ ಆಸೆಯನ್ನು ನೇರವೇರಿಸಬೇಕೆಂದು ಸಲಹೆ ನೀಡಿದರು.

ಈಶ್ವರಮ್ಮ ಶಾಲಾಡಳಿತ ಮಂಡಳಿ ಸದಸ್ಯೆ ಕೆ.ವಿ.ಸುಜಾತ ಮಾತನಾಡಿ, ಅಮ್ಮನ ಮಮತೆ ಆಕಾಶದಷ್ಟು ವಿಶಾಲ. ಅಪ್ಪನ ಉದಾರತೆ ಆಕಾಶದಲ್ಲಿ ಮಿನುಗುವ ಲೆಕ್ಕವಿರದಷ್ಟು ನಕ್ಷತ್ರಗಳಿದ್ದಂತೆ. ಪುರಾಣ ಕಾಲದಿಂದ ತಂದೆ-ತಾಯಿಯರ ಹೆಸರಿಸಿನ ಜೊತೆಗೆ ಮಹಾತ್ಮರ ಹೆಸರನ್ನು ಸೇರಿಸಿ, ಹೇಳುವುದನ್ನು ಕೇಳಿದ್ದೇವೆ. ಆದ್ದರಿಂದ ತಂದೆ-ತಾಯಿಯರಿಗೆ ಗೌರವಿಸಿ, ಒಳ್ಳೆಯ ಕೆಲಸ ಮಾಡಬೇಕೆಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾಡಳಿತ ಮಂಡಳಿಯ ಅಧ್ಯಕ್ಷೆ ಕೆ.ಆರ್.ಸುಜಾತ ಕೃಷ್ಣ, ಶಾಲೆಯ ಸಂಸ್ಥಾಪಕರಾದ ಮಾತೃಸ್ವರೂಪಿಗಳಾದ ಬಿ.ಆರ್.ಶಾಂತಕುಮಾರಿಯವರ ಆದರ್ಶಗಳು ನಮ್ಮೆಲ್ಲರಲ್ಲಿ ಮೇಳೈಸಿವೆ. ಯಾರು ತಂದೆ-ತಾಯಿಗಳನ್ನು ಗೌರವಿಸುತ್ತಾರೋ, ಅವರನ್ನು ಎಲ್ಲರೂ ಗೌರವಿಸುತ್ತಾರೆ. ನಿಸ್ವಾರ್ಥ ಪ್ರೇಮವನ್ನು ತಂದೆ-ತಾಯಿಗಳಲ್ಲಿ ಮಾತ್ರ ನೋಡಲು ಸಾಧ್ಯ. ತಂದೆ-ತಾಯಿ ಗುರುಗಳನ್ನು ಗೌರವಿಸಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಶಾಲಾಡಳಿತ ಮಂಡಳಿ ಕಾರ್ಯದರ್ಶಿ ಎ.ಆರ್.ಉಷಾರಂಗನಾಥ್, ಪ್ರಾಂಶುಪಾಲ ಕೆ.ಎಸ್.ಪ್ರಭುಕುಮಾರ್,ಉಪಪ್ರಾಂಶುಪಾಲರಾದ ಶಶಿರೇಖಾ ಸೇರಿದಂತೆ ಸಹ ಶಿಕ್ಷಕರು, ಪೋಷಕರು, ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಗರೀಬ್‌ಷಾವಲಿ ದರ್ಗಾದಲ್ಲಿ ಉರುಸ್ ಮತ್ತು ಖವಾಲಿ



» **ಚಳ್ಳಕೆರೆ**

ಸಮಾಜದಲ್ಲಿ ಪ್ರತಿಯೊಂದು ಸಮುದಾಯವೂ ತನ್ನ ಧಾರ್ಮಿಕ ಕಾರ್ಯಕ್ರಮಗಳ ಆಚರಣೆಗೆ ಸಂವಿಧಾನ ಅವಕಾಶ ಮಾಡಿಕೊಟ್ಟಿದೆ. ಎಲ್ಲರೂ ಪರಸ್ಪರ ಪ್ರೀತಿ, ವಿಶ್ವಾಸದಿಂದ ಸಹೋದರ ಭಾವನೆಯಿಂದ ನಡೆದುಕೊಳ್ಳುವತ್ತ ಎಲ್ಲರೂ ಗಮನ ನೀಡಬೇಕೆಂದು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ಮಂಡಳಿ ಅಧ್ಯಕ್ಷ, ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಅವರು, ನಗರಂಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗರೀಬ್‌ಷಾವಲೀ ದರ್ಗಾದಲ್ಲಿ ನಡೆದ ಉರುಸ್ ಮತ್ತು ಖವಾಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಇಲ್ಲಿ ಈ ಕಾರ್ಯಕ್ರಮ ಅತ್ಯಂತ ಯಶಸ್ವಿಯಾಗಿ ನಡೆಯುತ್ತಿರುವುದು ಸಂತಸದ ವಿಷಯ. ಮುಂದಿನ ದಿನಗಳಲ್ಲೂ ಈ ಕಾರ್ಯಕ್ರಮ ಹೀಗೆ ಮುಂದುವರೆಯಲಿ ಎಂದರು. ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಟಿ.ರವಿಕುಮಾರ್, ನಗರಸಭಾ ಸದಸ್ಯ ರಮೇಶ್‌ಗೌಡ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ನಗರಂಗೆರೆ ಪ್ರಾಥಮಿಕ ಮಾಜಿ ಅಧ್ಯಕ್ಷ ಸಿ.ಓಬಯ್ಯ, ತಿಪ್ಪೇರುದ್ರಪ್ಪ, ಪಂಚಾಯಿತಿ ಸದಸ್ಯರಾದ ಎಂ.ಹಿದಾಯಿತ್‌ವುಲ್ಲಾ, ಅಂಗಡಿರಮೇಶ್, ಎಂ.ಕುಮಾರಸ್ವಾಮಿ, ಜುಬೇರ್, ದಾದಾಪೀರ್, ಬಾಬು, ಮುಜೀಬುಲ್ಲಾ, ಅನ್ವರ್‌ಮಾಸ್ಟರ್ ಮುಂತಾದವರು ಉಪಸ್ಥಿತರಿದ್ದರು.

---

## ಮಹಿಳೆಯರಿಗೆ ಸ್ಥಳೀಯವಾಗಿ ಅವಕಾಶಗಳು ಸಿಗುವುದು ವಿರಳ: ಸ್ವಾತಿ

**ಹೊಸದುರ್ಗ:** ಗ್ರಾಮೀಣ ಭಾಗದ ಮಹಿಳೆಯರಿಗೆ ಸ್ವಯಂ ಉದ್ಯೋಗ ಬಗ್ಗೆ ಆಸಕ್ತಿ ಇರುತ್ತದೆ ಆದರೆ ಸ್ಥಳೀಯವಾಗಿ ಅವರಿಗೆ ಅವಕಾಶಗಳು ಸಿಗುವುದು ವಿರಳ ಇಂತಹ ಸದಾ ಅವಕಾಶ ಗಳು ಸಿಕ್ಕಾಗ ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಸದೃಡರಾಗಲು ಮತ್ತು ಯಶಸ್ವಿ ಉದ್ಯಮಿಯಾಗಲು ಮುಂದೆ ಬನ್ನಿ ಎಂದು ಸದ್ಗುರು ಆಯುರ್ವೇದ ಉತ್ಪನ್ನಗಳ ಸಂಸ್ಥೆ ಮಾಲೀಕರು ಹಾಗೂ ಪುರಸಭಾ ಸದಸ್ಯೆ ಶ್ರೀಮತಿ ಡಾ: ಸ್ವಾತಿಪ್ರದೀಪ್ ಮಹಿಳೆಯರಿಗೆ ಕರೆ ನೀಡಿದರು



ತಾಲೂಕಿನ ಶ್ರೀರಾಂಪುರ ಗ್ರಾಮದಲ್ಲಿ ಆಯೋಜಿಸಲಾಗಿದ್ದ ಉಚಿತ ಬ್ಯೂಟಿ ಪಾರ್ಲಾರ್ ತರಬೇತಿ ಕಾರ್ಯಕ್ರಮದಲ್ಲಿ ಮಹಿಳೆಯಗೆ ಮೇಕಪ್ ಮಾಡುವ ಮೂಲಕ ಉದ್ಘಾಟಿಸಿ ಮಾತಾನಾಡಿದರುಮಹಿಳೆಯರು ಸ್ವಾವಲಂಬಿ ಜೀವನ ನಡಸುವಂತೆ ಅವರಿಗೆ ಸ್ವಯಂ ಉದ್ಯೋಗದಂತ ಕಾರ್ಯಕ್ರಮಗಳನ್ನು ಗಂಗಕೃಷ್ಣ ಟ್ರಸ್ಟ್ ನಂತಹ ಸಂಘ ಸಂಸ್ಥೆಗಳು ಹೆಚ್ಚು ಹೆಚ್ಚು ಕಾರ್ಯರೂಪಗೊಳಿಸುವಂತಾಗಲಿ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗಂಗಕೃಷ್ಣ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಟ್ರಸ್ಟ್‌ನ ಅಧ್ಯಕ್ಷೆ ಶ್ರೀಮತಿ ಕೋಮಲ ವಹಿಸಿದ್ದರುಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿ ಕಾಚಾಪುರ ರಂಗಪ್ಪ,ಸಂಸ್ಥೆಯ ತರಬೇತಿ ಸಂಯೋಜಕರು ಮತ್ತು ಮಹಿಳಾಪರ ಚಿಂತಕರಾದ ಶ್ರೀಮತಿ ಶೋಭಾ ಮುರಳಿಕೃಷ್ಣ,ಬ್ಯೂಟಿಷಿಯನ್ ಶ್ರೀಮತಿ ಶಶಿಕಲಾಧರಣೇಶ್, ಶ್ರೀಮತಿ ಪದ್ಮ ಚಂದ್ರಶೇಖರ್ ಉಪಸ್ಥಿತರಿದ್ದರು.

---

**ಪ್ರಮುಖ ಸುದ್ದಿ**

# 15 ನೂತನ ಬಸ್‌ಗಳು ಗ್ರಾಮೀಣ ಜನರ ಸೇವೆಗೆ ಬರಲಿವೆ

» **ಹೊಸದುರ್ಗ**

ನಾನು ಶಾಸಕನಾಗಿದ್ದ 2013-18 ರ ಅವಧಿಯಲ್ಲಿ ನೂತನ ಕೆ.ಎಸ್. ಆರ್.ಟಿ.ಅಇ ಬಸ್ ನಿಲ್ದಾಣ ಹಾಗೂ ಘಟಕ (ಡಿಪೋ) ನಿರ್ಮಾಣ ಮಾಡಿ ಸಾರ್ವಜನಿಕರ ಸೇವೆಗೆ ಅವಕಾಶ ಕಲ್ಪಿಸಿದ್ದೆ. ಇದೀಗ ತಾಲೂಕಿನ ಜನರು, ರೈತರು, ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಗ್ರಾಮೀಣ ಸಾರಿಗೆ ಸೌಲಭ್ಯ ಒದಗಿಸಿದ್ದೇನೆ. ಮುಂದಿನ ದಿನಗಳಲ್ಲಿ 15 ನೂತನ ಬಸ್‌ಗಳು ಗ್ರಾಮೀಣ ಜನರ ಸೇವೆಗೆ ಬರಲಿವೆ. ಇಡೀ ತಾಲೂಕಿನಲ್ಲಿ ಗ್ರಾಮೀಣ ಸಾರಿಗೆ ವ್ಯವಸ್ಥೆಯನ್ನು ಬಲಪಡಿಸಲು ನಮ್ಮ ರಾಜ್ಯ ಕಾಂಗ್ರೆಸ್ ಸರಕಾರ ಸಿದ್ಧವಿದೆ ಎಂದು ಆಹಾರ ಮತ್ತು ನಾಗರೀಕ ಮಂಡಳಿಯ ಅಧ್ಯಕ್ಷ ಹಾಗೂ ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದ್ದಾರೆ.

ಪಟ್ಟಣದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಭಾನುವಾರ ನಾಲ್ಕು ಗ್ರಾಮೀಣ ಸಾರಿಗೆ ಬಸ್‌ಗಳನ್ನು ಹಸಿರು ನಿಶಾನೆ ತೋರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.



ಹೊಸದುರ್ಗದಿಂದ ಹೊರಡುವ ಬಸ್ ಮಾಡದಕೆರೆ-ಬೇವಿನಹಳ್ಳಿ ಮಾರ್ಗವಾಗಿ ಪುನಃ ಮಾಡದಕೆರೆ ಮಾರ್ಗವಾಗಿ ಹೊಸದುರ್ಗ ತಲುಪಲಿದೆ ಈ ಮಾರ್ಗದಲ್ಲಿ ಹೊಸದುರ್ಗ ಪಟ್ಟಣದ ಮುಖ್ಯ ರಸ್ತೆಯಲ್ಲಿ ಬರುವ ಹಳ್ಳಿಗಳ ಗೇಟ್‌ಗಳಲ್ಲಿ ಬಸ್ ನಿಲುಗಡೆ ಇರಲಿದೆ. ಅಯ್ಯನಹಳ್ಳಿ, ಬೇವಿನಹಳ್ಳಿ, ಪೂಜಾರಹಟ್ಟಿ, ಎಂ.ಮಲ್ಲಾಪುರ, ಮಾಳಿಗೆಹಟ್ಟಿ, ಬಂಟನಗವಿ, ಗಡಿಯಪ್ಪನಹಳ್ಳಿ, ಕೆರೆಕಲ್ಲಟ್ಟಿ ಕ್ರಾಸ್, ಇಂದಿರಾಗಾಂಧೀ ಸ್ಕೂಲ್, ರಂಗವ್ವನಹಳ್ಳಿ ಹುಲಿಕಟ್ಟೆ ಗೇಟ್, ಮಸಣಹಳ್ಳಿ ಗೇಟ್ ಮುಖಾಂತರ ಹೊಸದುರ್ಗ ತಲುಪಪಲಿದ್ದು, ಮತ್ತೊಂದು ಬಸ್ ಹೊಸದುರ್ಗದಿಂದ ಕೊಂಡಜ್ಜಿ-ಚೌಳಹಿರಿಯೂರು- ಯಗಟಿ ತಲುಪಲಿದೆ ಎಂದರು.

ಬಹುದಿನಗಳಿಂದ ಬೇಡಿಕೆಯಲ್ಲಿದ್ದ ಹಿರಿಯೂರು- ಬೆಂಗಳೂರು ನೇರ ಸಾರಿಗೆ ವ್ಯವಸ್ಥೆಗೆ ಚಾಲನೆ ಸಿಕ್ಕಿದ್ದು ಹೊಸದುರ್ಗ -ಹಿರಿಯೂರು- ಶಿರಾ-ತುಮಕೂರು-ಬೆಂಗಳೂರಿಗೆ ನಿಲುಗಡೆ ರಹಿತ( ಎಕ್ಸ್‌ಪ್ರಸ್) ಬಸ್ ಬಿಡಲಾಗಿದ್ದು ಹೊಸದುರ್ಗ - ಬೆಲಗೂರು- ಶ್ರೀರಾಂಪುರ ಮಾರ್ಗವಾಗಿ ಮತ್ತೊಂದು ಸಾರಿಗೆ ಸೇವೆ ನೀಡಲಾಗಿದೆ ಈ ಮಾರ್ಗವಾಗಿ ಬರುವ ಕೆಲ್ಲೋಡು, ಹ್ಯಾಂಡ್ ಪೋಸ್ಟ್, ಕಲ್ಕೆರೆ, ಕಬ್ಬಳ, ಬೆಲಗೂರು, ಕೋಡಿಹಳ್ಳಿ, ಗರಗ, ಯಾದಘಟ್ಟ, ತೊಣಚೇನಹಳ್ಳಿ, ಎಸ್.ಎಸ್.,.ಪಾಳ್ಯ, ನಗರಗೆರೆ, ಹಾರಗೊಂಡನಹಳ್ಳಿ, ಮೈಲಾರಪುರ, ಸೂಜಿಕಲ್ ಮಾರ್ಗವಾಗಿ ಶ್ರೀರಾಂಪುರ ತಲುಪಲಿದ್ದು ಮತೊಂದು ಬಸ್ ಹೊಸದುರ್ಗ-ಮಾವಿನಕಟ್ಟೆ-ಹೆಬ್ಬಳ್ಳಿ ಮಾರ್ಗವಾಗಿ ಸಂಚರಿಸಿ ಸೇವೆ ಸಲ್ಲಿಸಲಿದೆ ಎಂದರು.

ಈ ಸಂಧರ್ಬದಲ್ಲಿ ಚಿತ್ರದುರ್ಗ ವಿಭಾಗೀಯ ಕೆ.ಎಸ್. ಆರ್.ಟಿ.ಸಿ ನಿಯಂತ್ರಣಾಧಿಕಾರಿ ಸಿದ್ದೇಶ್ವರ ಹೆಬ್ಬಾರ್, ಚಿತ್ರದುರ್ಗ ವಿಭಾಗೀಯ ಸಂಚಾರ ಅಧಿಕಾರಿ ಸುರೇಶ್, ಹೊಸದುರ್ಗ ಡಿಪೋ ಸೂಪರ್‌ವೈಜರ್ ಬಸವರಾಜ್, ಇನ್ಸ್‌ಫೆಕ್ಟರ್ ರಫಿಯಾಬಾನು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕಾಂಗ್ರೆಸ್‌ಗೆ ನೇಮಕ

» **ಚಿತ್ರದುರ್ಗ**



ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಿ.ಕೆ.ಶಿವಕುಮಾರ್‌ರವರ ಆದೇಶದಂತೆ ಕೆ.ಪಿ.ಸಿ.ಸಿ. ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷರನ್ನಾಗಿ ದವಳಗಿರಿ ಬಡಾವಣೆಯ ಶಿವಣ್ಣ ಎನ್. ಇವರನ್ನು ನೇಮಕ ಮಾಡಲಾಗಿದೆ ಎಂದು ಕೆ.ಪಿ.ಸಿ.ಸಿ. ಹಿಂದುಳಿದ ವರ್ಗಗಳ ವಿಭಾಗದ ರಾಜ್ಯಾಧ್ಯಕ್ಷ ಎಸ್. ಮಧು ಬಂಗಾರಪ್ಪ ತಿಳಿಸಿದ್ದಾರೆ.


### ಅಕ್ಷರೋತ್ಸವವನ್ನು ಕಥೆಗಾರ ಮೋದೂರು ತೇಜ ಉದ್ಘಾಟಿಸಿದರು




» **ಚಿತ್ರದುರ್ಗ**

ಸಾಹಿತ್ಯದ ಮೂಲವೇ ಮಾನವೀಯತೆ. ಕವಿರಾಜ ಮಾರ್ಗದಲ್ಲಿ ಪರಧರ್ಮವನ್ನು ಸಹಿಸಿಕೊಳ್ಳಬೇಕೆಂದು ಹೇಳಿದೆ ಎಂದು ಕಥೆಗಾರ ಮೋದೂರು ತೇಜ ತಿಳಿಸಿದರು. ಅಕ್ಷರ ಚಪ್ಪರ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಸಂಸ್ಥೆ, ಅಕ್ಷರ ಚಪ್ಪರ ಮುದ್ರಣ ಮತ್ತು ಪ್ರಕಾಶನ ಸಹಯೋಗದೊಂದಿಗೆ ಪತ್ರಕರ್ತರ ಭವನದಲ್ಲಿ ಭಾನುವಾರ ನಡೆದ ವಿಚಾರಗೋಷ್ಠಿ, ಕವಿಗೋಷ್ಠಿ, ಗಳಗನಾಥ ಅಕ್ಷರ ಶ್ರೀ ಪ್ರಶಸ್ತಿ ಪ್ರದಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ಸಾಹಿತ್ಯಕ್ಕೆ ಸೌಹಾರ್ಧತೆಯನ್ನು ಸಾರುವ ಪರಂಪರೆಯಿದೆ. ಅಕ್ಷರ ಕೃಷಿ ಮಾಡುವವರಿಗೆ ಸಾಮಾಜಿಕ ಜವಾಬ್ದಾರಿಯಿರಬೇಕು. ಅಕ್ಷರ ಎಂದರೆ ಕೊರಳು ಕೊಡುವುದು, ಚಪ್ಪರವೆಂದರೆ ನೆರಳು ನೀಡುತ್ತದೆ. ಹಾಗಾಗಿ ಇಂತಹ ಒಳ್ಳೆಯ ಅರ್ಥಪೂರ್ಣವಾದ ಹೆಸರನ್ನಿಟ್ಟುಕೊಂಡಿರುವ ಸಂಸ್ಥೆಯಿಂದ ಸಮಾಜಮುಖಿ ಕೆಲಸಗಳಾಗಬೇಕೆಂದು ಹಾರೈಸಿದರು.ಕೇವಲ ಸಾಹಿತ್ಯಕ್ಕೆಷ್ಟೆ ಸೀಮಿತವಾಗದೆ ನಾಡುನುಡಿನೆಲಜಲದಬಗ್ಗೆಕಾಳಜಿಯಿಟ್ಟುಕೊಂಡು ಸೃಜನಶೀಲ, ಕ್ರಿಯಾಶೀಲವಾಗಿರಬೇಕೆಂದು ತಿಳಿಸಿದರು.ಶ್ರೀಮತಿ ಡಿ.ಶಬ್ರಿನಾ ಮಹಮದ್ ಅಲಿ ಮಾತನಾಡಿ ಅಕ್ಷರ ಎನ್ನುವುದು ಯಾವುದೇ ಒಂದು ವ್ಯಕ್ತಿಗೆ ಸಂಬಂಧಿಸಿದ್ದಲ್ಲ. ಭಾಷೆಗೆ ಸೇರಿದ್ದು, ಎರಡುವರೆ ಸಾವಿರ ವರ್ಷಗಳ ಇತಿಹಾಸವಿರುವ ಕನ್ನಡ ಭಾಷೆಯನ್ನು ಎಲ್ಲರೂ ಬಳಸುವ ಮೂಲಕ ಉಳಿಸಿ ಬೆಳೆಸಬೇಕಾಗಿರುವುದರಿಂದ ಇಂತಹ ಕಾರ್ಯಕ್ರಮಗಳು ಹೆಚ್ಚು ನಡೆಯಬೇಕೆಂದು ಅಭಿಪ್ರಾಯಪಟ್ಟರು.ಸಾಹಿತ್ಯದಿಂದ ಸಿಗುವ ಸಂಸ್ಕಾರ ಬೇರೆ ಯಾವುದರಿಂದಲೂ ದೊರಕುವುದಿಲ್ಲ. ಸತ್ಯಹರಿಶ್ಚಂದ್ರ ನಾಟಕ ನೋಡಿ ಗಾಂಧಿಜಿ ಮನಸ್ಸಿನ ಮೇಲೆ ಪ್ರಭಾವ ಬೀರಿತು. ಸಾಹಿತ್ಯ ಮತ್ತು ಪುಸ್ತಕಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಆಗ ಒಳ್ಳೆ ಆಲೋಚನೆ ಮೂಡುತ್ತದೆ. ಮನಸ್ಸಿನ ಭಾವನೆಗಳನ್ನು ಮತ್ತೊಬ್ಬರ ಜೊತೆ ವ್ಯಕ್ತಪಡಿಸಲು ಕನ್ನಡ ಸುಂದರ ಭಾಷೆ ಎಂದು ಹರ್ಷ ವ್ಯಕ್ತಪಡಿಸಿದರು.ಅಕ್ಷರ ಚಪ್ಪರ ಮುದ್ರಣ ಮತ್ತು ಪ್ರಕಾಶನದ ಅಧ್ಯಕ್ಷೆ ಮಧು ಅಕ್ಷರಿ ಮಾತನಾಡಿ ಸಾಹಿತ್ಯದ ಮೂಲಕ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯ. ನಮ್ಮ ಪ್ರಕಾಶನದ ವತಿಯಿಂದ ಎರಡು ಪುಸ್ತಕಗಳನ್ನು ಹೊರತಂದಿದ್ದೇವೆ. ಮುಂದಿನ ದಿನಗಳಲ್ಲಿ ಕನ್ನಡದ ಸೇವೆ ನಿರಂತರವಾಗಿ ಮಾಡಬೇಕೆಂಬುದು ನಮ್ಮ ಉದ್ದೇಶ. ಇದಕ್ಕೆ ಎಲ್ಲರ ಸಹಕಾರ ಅತ್ಯವಶ್ಯಕ ಎಂದು ಕೋರಿದರು.ಅಕ್ಷರ ಚಪ್ಪರ ವೇದಿಕೆ ಕಾರ್ಯದರ್ಶಿ ದೀಕ್ಷಿತ್‌ನಾಯಕ್, ಸುನೀಲ್‌ಕುಮಾರ್, ದೀಪಿಕಾಬಾಬು ಇನ್ನು ಅನೇಕರು ವೇದಿಕೆಯಲ್ಲಿದ್ದರು.25 ಕ್ಕೂ ಹೆಚ್ಚು ಕವಿಗಳು ಕವನಗಳನ್ನು ವಾಚನ ಮಾಡಿದರು. ಸನ್ನಿಧಿ ಬಿ.ಕೂಚುಪುಡಿ ನೃತ್ಯ ಪ್ರದರ್ಶಿಸಿದರು.

### ಕರ್ಪೂರಿ ಠಾಕೂರ್‌ರವರ ಶತಮಾನೋತ್ಸವ



» **ಚಿತ್ರದುರ್ಗ**

ಸವಿತಾ ಮಹರ್ಷಿ ಜಯಂತ್ಯೋತ್ಸವ ಹಾಗೂ ಕರ್ಪೂರಿ ಠಾಕೂರ್‌ರವರ ಶತಮಾನೋತ್ಸವ ಕಾರ್ಯಕ್ರಮ ಫೆ.27 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ ಎರಡು ಗಂಟೆಯವರೆಗೆ ತ.ರಾ.ಸು. ರಂಗಮಂದಿರದಲ್ಲಿ ನಡೆಯಲಿದೆ.ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ, ಜಿಲ್ಲಾ ಸವಿತಾ ಸಮಾಜದ ವತಿಯಿಂದ ನಡೆಯುವ ಸವಿತಾ ಮಹರ್ಷಿ ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 9 ಕ್ಕೆ ಕೋಟೆ ರಸ್ತೆಯಲ್ಲಿರುವ ಏಕನಾಥೇಶ್ವರಿ ಪಾದಗುಡಿಯಿಂದ ವಿವಿಧ ಕಲಾ ತಂಡಗಳೊಂದಿಗೆ ಹೊರಡುವ ಮೆರವಣಿಗೆ ರಾಜಬೀದಿಗಳ ಮೂಲಕ ಸಾಗಿ ತ.ರಾ.ಸು.ರಂಗಮಂದಿರ ತಲುಪಲಿದೆ.

**ನಾಯಕನಹಟ್ಟಿ ದೊಡ್ಡ ರಥೋತ್ಸವ ಪೂರ್ವ ಸಿದ್ಧತಾ ಸಭೆಯಲ್ಲಿ ಸಚಿವ ಡಿ.ಸುಧಾಕರ್ ಸೂಚನೆ**

# ಈ ಬಾರಿ ಜಕಾತಿ ವಸೂಲಿ ಇಲ್ಲ, ಕುಡಿಯುವ ನೀರಿಗೆ ತೊಂದರೆ ಆಗದಂತೆ ನೋಡಿಕೊಳ್ಳಿ

» **ಚಿತ್ರದುರ್ಗ**



ಬರಗಾಲದ ಹಿನ್ನಲೆಯಲ್ಲಿ, ಭಕ್ತಾದಿಗಳ ಮನವಿಯಂತೆ ಈ ಬಾರಿ ನಾಯಕನಹಟ್ಟಿಯ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಹಾಕಲಾಗುವ, ಅಂಗಡಿ ಹಾಗೂ ವಾಣಿಜ್ಯ ವ್ಯಾಪಾರ ಮಳಿಗೆಗಳ ಜಕಾತಿ ವಸೂಲಿ ಮಾಡುವುದಿಲ್ಲ. ಅಧಿಕಾರಿಗಳು ಕುಡಿಯುವ ನೀರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಯೋಜನಾ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಿರುವ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿಯ ಶ್ರೀ ಗುರು ತಿಪ್ಪೇರುದ್ರಸ್ವಾಮಿಯ ದೊಡ್ಡ ರಥೋತ್ಸವ–2024 ರ ಸಿದ್ಧತೆ ಕುರಿತು ನಾಯಕನಹಟ್ಟಿ ಒಳಮಠ ಸಮುದಾಯಭವನದ ಆವರಣದಲ್ಲಿ ಶನಿವಾರ ಏರ್ಪಡಿಸಲಾದ ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ನಾಯಕನಹಟ್ಟಿಯ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಕ್ಷೇತ್ರದ ಜಾತ್ರೆಯು ಮಾರ್ಚ್ 19 ರಿಂದ ಏಪ್ರಿಲ್ 01 ರವರೆಗೆ ನಡೆಯಲಿದ್ದು, ಜಾತ್ರೆಯ ಅಂಗವಾಗಿ ಮಾರ್ಚ್ 26 ಮಂಗಳವಾರದಂದು ದೊಡ್ಡ ರಥೋತ್ಸವ ಜರುಗಲಿದೆ. ರಾಜ್ಯ ಸರ್ಕಾರ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಅವಕಾಶ ಕಲ್ಪಿಸಿರುವುದರಿಂದ, ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಜಾತ್ರೆಗೆ ಆಗಮಿಸುವ ನಿರೀಕ್ಷೆ ಇದೆ. ಹೀಗಾಗಿ ಕೆಎಸ್‌ಆರ್‌ಟಿಸಿ ಅಧಿಕಾರಿಗಳು ನಾಯಕನಹಟ್ಟಿ ಜಾತ್ರೆಗೆ ಹೆಚ್ಚಿನ ಬಸ್‌ಗಳ ವ್ಯವಸ್ಥೆ ಕಲ್ಪಿಸಬೇಕು. ನಾಯಕನಹಟ್ಟಿಯಲ್ಲಿ ಪ್ರಸ್ತುತ ಇರುವ ಕೊಳವೆ ಬಾವಿಗಳ ಜೊತೆಗೆ ಅಗತ್ಯಕ್ಕೆ ಅನುಗುಣವಾಗಿ ಹೊಸದಾಗಿ ಕೊಳವೆ ಬಾವಿ ಕೊರೆದು, ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ನಾಯಕಹಟ್ಟಿ ಸಂಪರ್ಕಿಸುವ ಎಲ್ಲಾ ರಸ್ತೆಗಳನ್ನು ದುರಸ್ತಿಗೊಳಿಸಬೇಕು. ರಸ್ತೆಗಳಲ್ಲಿ ಗುಂಡಿಗಳು ಕಂಡುಬಂದರೆ ಸಂಬಂದಪಟ್ಟ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳುವುದಾಗಿ ಎಂದು ಸಚಿವ ಡಿ.ಸುಧಾಕರ್ ಹೇಳಿದರು.

### ಸಮಿತಿಗಳ ರಚನೆ

ಸ್ವಚ್ಛತೆ, ಕುಡಿಯುವ ನೀರು, ಸಾರಿಗೆ, ರಕ್ಷಣೆ, ಆರೋಗ್ಯ ಸೇರಿದಂತೆ ಇತರೆ ವಿಷಯಗಳಿಗೆ ಪ್ರತ್ಯೇಕ ಸಮಿತಿಗಳನ್ನು ರಚಿಸಬೇಕು. ಈ ಸಮಿತಿಗಳು ಪರಸ್ಪರ ಸಮನ್ವಯತಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಆರೋಗ್ಯ ಇಲಾಖೆಯಿಂದ ತಾತ್ಕಾಲಿಕವಾಗಿ ಆಸ್ಪತ್ರೆ ತೆರೆಬೇಕು. ಅಗತ್ಯ ಔಷಧಿಗಳನ್ನು ಸಂಗ್ರಹಿಸಿ ಇಟ್ಟುಕೊಳ್ಳಬೇಕು. ತುರ್ತು ಸಂದರ್ಭಕ್ಕಾಗಿ ಕನಿಷ್ಟ 3 ಅಗ್ನಿಶಾಮಕ ವಾಹನ ಹಾಗೂ ಅಂಬ್ಯುಲೆನ್ಸ್‌ಗಳನ್ನು ಸ್ಥಳದಲ್ಲಿರಿಸಬೇಕು. ರಥೋತ್ಸವ ದಿನದಂದು ಜನದಟ್ಟಣೆ ಹಾಗೂ ವಾಹನ ಸಂಚಾರ ದಟ್ಟಣೆ ಉಂಟಾಗಿ ವಾಹನ ಸವಾರರು ಹಾಗೂ ಸಾರ್ವಜನಿಕರು ತೊಂದರೆ ಎದುರಿಸದಂತೆ ಪೊಲೀಸ್ ಇಲಾಖೆ ಅಗತ್ಯ ಮುಂಜಾಗ್ರತಾ ಕ್ರಮ ವಹಿಸಬೇಕು ಎಂದರು. ಪ್ರಾಣಿಬಲಿ ನಿಷೇಧವನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು. ನಾಯಕನಹಟ್ಟಿ ಪಟ್ಟಣದಲ್ಲಿ ಅಗ್ನಿಶಾಮಕ ಕಚೇರಿ ಪ್ರಾರಂಭ, ಬರಗಾಲದ ಹಿನ್ನಲೆಯಲ್ಲಿ ಅಂಗಡಿ ಮುಂಗಟ್ಟುಗಳಿಗೆ ಯಾವುದೇ ಜಕಾತಿ ವಸೂಲಿ ಮಾಡಬಾರದು, ಸ್ವಚ್ಛತೆಗೆ ಆದ್ಯತೆ ನೀಡುವುದು, ಜಾತ್ರೆಯ ದೊಡ್ಡ ರಥೋತ್ಸದಂದು ಹಾಗೂ ದೊಡ್ಡ ರಥೋತ್ಸವದ ನಂತರ ಸತತವಾಗಿ ಎರಡು ದಿನಗಳ ಕಾಲ ಸಮರ್ಪಕ ಕುಡಿಯುವ ನೀರು ಪೂರೈಕೆ ಮಾಡುವುದು, ಜಾತ್ರೆಯ ಅಂಗವಾಗಿ 24*7 ನಿರಂತರ ವಿದ್ಯುತ್ ಪೂರೈಕೆ ಮಾಡುವಂತೆ ಪೂರ್ವಭಾವಿ ಸಭೆಯಲ್ಲಿ ಗ್ರಾಮಸ್ಥರು ಮನವಿ ಮಾಡಿದರು.

ಮುಕ್ತಿ ಬಾವುಟ ಹರಾಜಿಗೆ ಮಾರ್ಗಸೂಚಿ : ರಥೋತ್ಸವದ ತರುವಾಯ ನಡೆಯುವ ಮುಕ್ತಿ ಬಾವುಟ ಹರಾಜಿನ ಹಣ ಪಾವತಿಗೆ ಸಂಬಂಧಿಸಿದಂತೆ ಯಾವುದೇ ನಿಯಮಗಳು ಇಲ್ಲದಿರುವುದರಿಂದ, ಹರಾಜಿನಲ್ಲಿ ಯಶಸ್ವಿಯಾಗುವವರು ಸಮರ್ಪಕವಾಗಿ ಹಣ ಪಾವತಿ ಮಾಡುತ್ತಿಲ್ಲ, ಹೀಗಾಗಿ ಇದಕ್ಕೆ ಸೂಕ್ತ ನಿಯಮ ರೂಪಿಸಲು ಸಾರ್ವಜನಿಕರು ಸಭೆಯಲ್ಲಿ ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು ಮುಕ್ತಿ ಬಾವುಟ ಹರಾಜಿನ ಮೊತ್ತ ಪಾವತಿ ಸಂಬಂಧ ಸೂಕ್ತ ಮಾರ್ಗಸೂಚಿ ರೂಪಿಸಲಾಗುವುದು. ಹರಾಜಿನಲ್ಲಿ ಭಾಗವಹಿಸುವವರು ಮೊದಲೇ ನೊಂದಣಿ ಮಾಡಿಕೊಳ್ಳಬೇಕು. ಕೂಗಿದ ಹರಾಜು ಮೊತ್ತವನ್ನು ನಿಗದಿತ ಸಮಯದಲ್ಲಿ ದೇವಸ್ಥಾನ ಮಂಡಳಿಗೆ ಕಟ್ಟುವಂತೆ ವ್ಯವಸ್ಥೆ ರೂಪಿಸುವುದಾಗಿ ಸಚಿವ ಡಿ.ಸುಧಾಕರ್ ಭರವಸೆ ನೀಡಿದರು.

ಮೊಳಕಾಲ್ಮೂರು ಶಾಸಕ ಎನ್. ವೈ. ಗೋಪಾಲಕೃಷ್ಣ ಮಾತನಾಡಿ, ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ ಕುಡಿಯುವ ನೀರು, ರಸ್ತೆ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಉತ್ತಮವಾಗಿರಬೇಕು. ಬೇಸಿಗೆ ಸಂದರ್ಭವಾದ ಕಾರಣ ಆರೋಗ್ಯಕ್ಕೆ ಬಹಳ ವಿಶೇಷ ಕಾಳಜಿ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಒಳಮಠದ ಎದುರಿನ ನಾಯಕನಹಟ್ಟಿ ಸಂಪರ್ಕಿಸುವ ಸೇತುವೆ ಹಾಗೂ ರಸ್ತೆ ಕಾಮಗಾರಿಗೆ ರೂ.50 ಲಕ್ಷ ಅನುದಾನ ನೀಡಲಾಗಿದೆ. ತಿಪ್ಪೇರುದ್ರಸ್ವಾಮಿ ದೇವಸ್ಥಾನಕ್ಕೆ ಸಂಬಂಧಿಸಿದ ಹಣವನ್ನು ಕೇವಲ ಬಡ್ಡಿಗಾಗಿ ಬ್ಯಾಂಕಿನಲ್ಲಿ ಠೇವಣಿ ಇರಿಸುವುದಲ್ಲ, ದೇವಸ್ಥಾನದ ಹಣವನ್ನು ಕ್ಷೇತ್ರದ ಅಭಿವೃದ್ಧಿಗೆ ಹಾಗೂ ಜಾತ್ರಾ ಮಹೋತ್ಸವದಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಬಳಸಬೇಕು. ಜಿಲ್ಲಾಧಿಕಾರಿಗಳು ದೇವಸ್ಥಾನಕ್ಕೆ ಸಂಬಂಧಿಸಿದ ಹಣದಲ್ಲಿ ಕನಿಷ್ಟ ರೂ. 10 ಲಕ್ಷ ಹಣವನ್ನು ಜಾತ್ರೆಯ ಅಥವಾ ಕ್ಷೇತ್ರದ ಅಭಿವೃದ್ಧಿಯ ಕೆಲಸ ಕಾರ್ಯಗಳ ನಿರ್ವಹಣೆ ಹಾಗೂ ಮೂಲಭೂತ ಸೌಕರ್ಯಗಳ ವ್ಯವಸ್ಥೆಗೆ ಬಳಕೆ ಮಾಡುವಂತೆ ಸಲಹೆ ನೀಡಿದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ ಬರಗಾಲ ಹಾಗೂ ಸಾರ್ವತ್ರಿಕ ಲೋಕಸಭಾ ಚುನಾವಣೆ ಸಮೀಪ ಇರುವುದರಿಂದ ಬಹು ಬೇಗನೇ ಜಾತ್ರೆ ವ್ಯವಸ್ಥೆಯ ಸಿದ್ಧತೆಗಳನ್ನು ಅಧಿಕಾರಿಗಳು ಮಾಡಬೇಕು. ಕುಡಿಯುವ ನೀರಿಗೆ ಪಟ್ಟಣ ಪಂಚಾಯತಿ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಬೇಕು. ಬೇರೆ ಸ್ಥಳೀಯ ಸಂಸ್ಥೆಗಳು ಹಾಗೂ ಹಾಲಿನ ಟ್ಯಾಂಕರ್‌ಗಳನ್ನು ತರಿಸಿ ನೀರು ಸರಬರಾಜು ಮಾಡಲು ತಾತ್ಕಾಲಿಕ ವ್ಯವಸ್ಥೆ ಮಾಡಿಕೊಳ್ಳುವಂತೆ ಪಟ್ಟಣ ಪಂಚಾಯಿತಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪಟ್ಟಣದ ಬೀದಿ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು. ಪಟ್ಟಣದ ಖಾಲಿ ಜಾಗದಲ್ಲಿನ ಜಾಲಿ ಗಿಡಗಳನ್ನು ಕಡಿದು ಸ್ವಚ್ಛಗೊಳಿಸಬೇಕು. ಸ್ವಚ್ಛತಾ ಕಾರ್ಯಕ್ಕಾಗಿ ಬೇರೆ ನಗರ ಸ್ಥಳೀಯ ಸಂಸ್ಥೆಗಳಿಂದ ಅಗತ್ಯವಿರುವಷ್ಟು ಪೌರ ಕಾರ್ಮಿಕರನ್ನು ನೇಮಿಸಿಕೊಳ್ಳಬೇಕು. ಸಂಚಾರಿ ಶೌಚಾಲಯಗಳ ಬದಲಿಗೆ ಖಾಲಿ ಸ್ಥಳಗಳಲ್ಲಿ ಕನಿಷ್ಠ 50 ರಂತೆ ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸಬೇಕು. ರಸ್ತೆ ಸಾರಿಗೆ ಅಧಿಕಾರಿಗಳು ಹೊರ ಜಿಲ್ಲೆಗಳ ಡಿಪೋಗಳಿಂದ ಪತ್ರಿ ಬಾರಿ ನಿಯೋಜಿಸುತ್ತಿದ್ದ ಬಸ್ ಸಂಖ್ಯೆಗಳಿಗಿಂತ ಶೇ.20 ಹೆಚ್ಚಿನ ಬಸ್‌ಗಳನ್ನು ನಿಯೋಜನೆ ಮಾಡಬೇಕು ಎಂದರು.

## ನಮ್ಮೂರು ಹಬ್ಬಳ್ಳಿ ಎಂಬ ಪುಸ್ತಕ ಲೋಕಾರ್ಪಣೆ

» **ಹೊಸದುರ್ಗ**



ಮನುಷ್ಯನಾಗಿ ಹುಟ್ಟಿದ ಮೇಲೆ ಕೆಲವೊಂದು ಋಣಗಳನ್ನು ತೀರಿಸುವುದು ಅವನ ಕರ್ತವ್ಯ ಹಾಗೆ ನಮ್ಮ ಊರಿನಲ್ಲಿ ಹುಟ್ಟಿದ ಮೇಲೆ ಊರಿನ ಋಣವನ್ನ ತೀರಿಸುವುದೂ ಕೂಡ ನಮ್ಮ ಕರ್ತವ್ಯ ಎಂದು ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ಕರೆ ನೀಡಿದರು.

ಪಟ್ಟಣದ ರಾಮಕೃಷ್ಣ ಸದನದಲ್ಲಿ ಅನಿಕೇತನ ಬಳಗದಿಂದ ಭಾನುವಾರ ಆಯೋಜಿಸಲಾಗಿದ್ದ ಎಸ್.ತಿಪ್ಪೇಸ್ವಾಮಿಯವರ "ನಮ್ಮೂರು ಹಬ್ಬಳ್ಳಿ" ಎಂಬ ಪುಸ್ತಕವನ್ನ ಲೋಕಾರ್ಪಣೆ ಮಾಡಿ ಮಾತನಾಡಿದರು.

ತಾಯಿಋಣ,ದೇಶದಋಣ,ಉಪ್ಪಿನ ಋಣ ಈಗೆ ಹಲವಾರು ಪ್ರಕಾರದ ಋಣಗಳನ್ನ ತೀರಿಸಲು ನಾವು ಬದ್ದರಾಗಿರಬೇಕು ಈ ಒಂದು ಹಿನ್ನೆಲೆಯಲ್ಲಿ ಎಸ್.ತಿಪ್ಪೇಸ್ವಾಮಿಯವರು ಬರದಿರುವ "ನಮ್ಮೂರು ಹೆಬ್ಬಳ್ಳಿ" ಎಂಬ ಪರಿಚಯಾತ್ಮಕ ಲೇಖನದ ಪುಸ್ತಕ ನಿಜಕ್ಕೂ ತುಂಭಾ ಸೊಗಸಾಗಿದೆ ಎಂಬ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.



**ಕರುನಾಡ ವಿಜಯಸೇನೆ ಹೊಳಲ್ಕೆರೆ ತಾಲ್ಲೂಕು ಅಧ್ಯಕ್ಷರಾಗಿ ಯಶವಂತ್ ಶಿವಪುರ ನೇಮಕ.**

**ಪ್ರಮುಖ ಸುದ್ದಿ**

# ಸಿದ್ದಯ್ಯನಕೋಟೆ: ಜನಮನ ರಂಜಿಸಿದ ಜನಪರ ಉತ್ಸವ

» **ಚಿತ್ರದುರ್ಗ**





ಮೊಳಕಾಲ್ಮುರು ತಾಲ್ಲೂಕಿನ ಸಿದ್ದಯ್ಯನಕೋಟೆಯ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಶಾಖಾಮಠದಲ್ಲಿ ಈಚೆಗೆ ನಡೆದ ಜನಪರ ಉತ್ಸವದಲ್ಲಿ ಜಿಲ್ಲೆಯ ಕಲಾವಿದರು ವಿವಿಧ ಜನಪದ ಕಲೆಗಳನ್ನು ಪ್ರದರ್ಶಿಸುವ ಮೂಲಕ ಜನಮನ ರಂಜಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಿದ್ದಯ್ಯನಕೋಟೆಯ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಶಾಖಾಮಠದಲ್ಲಿ ಹಮ್ಮಿಕೊಂಡಿದ್ದ ಜನಪರ ಉತ್ಸವದಲ್ಲಿ ಗ್ರಾಮೀಣ ಭಾಗದ ಸಂಸ್ಕೃತಿ, ಸಂಪ್ರದಾಯ ಬಿಂಬಿಸುವ ಜನಪದ ಕಲೆಗಳ ವೈಭವ, ಜಾನಪದ ಸೊಗಡು ಅನಾವರಣಗೊಂಡಿತು.

ಹೊಸದುರ್ಗದ ಕಂತೇಶ್ ಮತ್ತು ತಂಡದವರ ಕ್ರಾಂತಿಗೀತೆಗಳು, ಚಿಕ್ಕೋಬನಹಳ್ಳಿಯ ಮಾರಕ್ಕ ಮತ್ತು ತಂಡದವರ ತತ್ವಪದಗಳು, ಸಿದ್ದಯ್ಯನಕೋಟೆ ನುಂಕೇಶ್ ಮತ್ತು ತಂಡದವರ ವಚನ ಗಾಯನ, ಕೋನಸಾಗರದ ಶಿವಣ್ಣ ಮತ್ತು ಸಂಗಡಿಗರ ಕನ್ನಡ ಗೀತೆ ಗಾಯನ, ಮೊಳಕಾಲ್ಮುರಿನ ಲೋಕೇಶ್ ಮತ್ತು ತಂಡದವ ಜಾನಪದ ಗೀತೆ, ಚಳ್ಳಕೆರೆ ಮುತ್ತುರಾಜ್ ಮತ್ತು ತಂಡದವರ ಭಾವಗೀತೆ, ಚಿಕ್ಕೋನಹಳ್ಳಿಯ ಸಿ.ಎಂ.ಬಾಬು ಮತ್ತು ತಂಡದವರ ಜಾನಪದ ಸಂಗೀತ, ಚಿತ್ರದುರ್ಗದ ನಿರ್ಮಲ ಮತ್ತು ತಂಡದವರ ಸಮೂಹ ನೃತ್ಯ, ಕೆ.ಗಂಗಾಧರ್ ಮತ್ತು ತಂಡದಿಂದ ವಚನ ಸಂಗೀತ, ಮಲ್ಲೂರಹಳ್ಳಿ ರಾಜಣ್ಣ ಮತ್ತು ತಂಡದಿಂದ ರಂಗಗೀತೆಗಳು, ಓಬೇನಹಳ್ಳಿ ಹಿಮಂತರಾಜ್ ಮತ್ತು ತಂಡದಿಂದ ಸುಗಮ ಸಂಗೀತ ಪ್ರಸ್ತುತ ಪಡಿಸಲಾಯಿತು.

ಜಾನಪದ ಕಲಾತಂಡಗಳ ಅದ್ದೂರಿ ಮೆರವಣಿಗೆ: ಜನಪರ ಉತ್ಸವದ ಅಂಗವಾಗಿ ಸಿದ್ದಯ್ಯನಕೋಟೆ ಗ್ರಾಮದಲ್ಲಿ ಜಾನಪದ ಕಲಾತಂಡಗಳ ಮೆರವಣಿಗೆ ಅದ್ದೂರಿಯಾಗಿ ನಡೆಯಿತು.

ಹುಲ್ಲೂರಿನ ಕೃಷ್ಣಪ್ಪ ಮತ್ತು ತಂಡದವರ ತಮಟೆ, ಹುಲ್ಲೇಹಾಳ್ ಡಿ.ನಾಗರಾಜ್ ಮತ್ತು ತಂಡದವರ ಕಹಳೆ, ಧಾರವಾಡದ ಪ್ರಕಾಶ್ ಮಲ್ಲಿಗೆವಾಡ ಮತ್ತು ತಂಡದ ಜಾನಪದ ನೃತ್ಯ, ವೆಂಕಟೇಶ್ ನಾಯ್ಕ್ ಮತ್ತು ತಂಡದ ನಗಾರಿ, ಚೀಳಂಗಿಯ ಶಿವಕುಮಾರ್ ಮತ್ತು ತಂಡದ ತ್ರಾಷ್, ಹುಲ್ಲೂರು ನಿಂಗಪ್ಪ ಮತ್ತು ತಂಡದವರ ಗಾರುಡಿಗೊಂಬೆ, ಚೀರನಹಳ್ಳಿಯ ದಿನೇಶ್ ಅವರ ನಾಸಿಕ್ ಡೋಲು, ಹಿರಿಯೂರು ಗುರುಮೂರ್ತಿಯವರ ಹಗಲುವೇಷ, ಮುತ್ತಿಗಾರಹಳ್ಳಿಯ ಗಂಗಣ್ಣನವರ ತಮಟೆ ವಾದ್ಯ ಚರ್ಮ, ನೆಲ್ಲೆಕಟ್ಟೆ ತಿಪ್ಪೇಸ್ವಾಮಿ ಅವರ ಅರೆವಾದ್ಯ ಜಾನಪದ ಕಲಾತಂಡಗಳ ಮೆರವಣಿಗೆಗೆ ಹೆಚ್ಚಿನ ಮೆರಗು ನೀಡಿತು.

ಜನಪರ ಉತ್ಸವ ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಮಾತನಾಡಿ, ರಾಜ್ಯ ಸರ್ಕಾರ ಪ್ರತಿ ವರ್ಷವೂ ಜನಪರ ಉತ್ಸವನ್ನು ನಡೆಸುತ್ತಿದ್ದು, ತಳಸಮುದಾಯದಲ್ಲಿರುವ ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಪರಿಶಿಷ್ಟ ಜಾತಿ ಕಲಾವಿದರಿಗಾಗಿ ಈ ಕಾರ್ಯಕ್ರಮ ನಡೆಸಲಾಗುತ್ತಿದೆ. ಕಲಾವಿದರು ಒಂದು ವೇದಿಕೆ ಮೇಲೆ ಸೇರಿ ಜಾನಪದ ಕಲೆಗಳನಲ್ಲು ಪ್ರದರ್ಶಿಸಲಾಗುತ್ತದೆ ಮತ್ತು ಕಲಾವಿದರಿಗೆ ಪರಿಶಿಷ್ಟ ಜಾತಿ ಉಪಯೋಜನೆಯಡಿ ಗೌರವಧನ ನೀಡಲಾಗುತ್ತದೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಇನ್ನೂ ಅನೇಕ ಕಾರ್ಯಕ್ರಮಗಳಿದ್ದು, ಗಿರಿಜನ ಉತ್ಸವ, ಚಿಗುರು, ಸಾಂಸ್ಕೃತಿಕ ಸೌರಭ, ಯುವ ಸೌರಭ, ಮೂಲಸಂಸ್ಕೃತಿ ಕನ್ನಡಸಂಸ್ಕೃತಿಪ್ರಾಯೋಜಿತಕಾರ್ಯಕ್ರಮ, ಅಂಬೇಡ್ಕರ್ ಓದು ಬರಹ ಹಾಗೂ ಕಲಾವಿದರಿಗೆ ಮಾಸಾಶನ ನೀಡುವುದು ಇತ್ಯಾದಿ ಯೋಜನೆಗಳಿದ್ದು, ಕಲಾವಿದರು ಇವುಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದರು.

ಸಿದ್ದಯ್ಯನಕೋಟೆ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರಶಾಖಾಮಠದಬಸವಲಿಂಗ ಮಹಾಸ್ವಾಮೀಜಿ ಮಾತನಾಡಿ, ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇನ್ನೂ ಹೆಚ್ಚಿನದಾಗಿ ಕಲೆಗಳನ್ನು ಬೆಳೆಸುವ ಜವಾಬ್ದಾರಿ ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬೀದರ್ ಜಿಲ್ಲೆಯ ಬಾಲ್ಕಿಯ ಹಿರೇಸಂಸ್ಥಾನ ಮಠದ ನಾಡೋಜ ಶ್ರೀ ಬಸವಲಿಂಗಪಟ್ಟಾಧ್ಯಕ್ಷರು, ಇಳಕಲ್ ಸಂಸ್ಥಾನಮಠದಗುರುಮಹಾಂತ ಸ್ವಾಮೀಜಿ, ಸಿದ್ದಯ್ಯನಕೋಟೆ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಶಾಖಾ ಮಠದ ಬಸವಲಿಂಗ ಮಹಾಸ್ವಾಮೀಜಿ, ಚಿತ್ರದುರ್ಗದ ಬಸವಮುರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ, ಸಿದ್ದಯ್ಯನಕೋಟೆ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಶಾಖಾ ಮಠದ ಕಾರ್ಯದರ್ಶಿ ಪಿ.ಆರ್. ಕಾಂತರಾಜ್, ಜಾನಪದ ಕಲಾವಿದರು ಹಾಗೂ ರಾಜ್ಯ ಮಾಶಾಸನ ಸಮಿತಿ ಸದಸ್ಯ ಡಿ.ಓ.ಮುರಾರ್ಜಿ, ಜಾನಪದ ಕಲಾವಿದ ಪ್ರಕಾಶ್ ಮಲ್ಲಿಗೆವಾಡ ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T